KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜನವರಿ ೬, ೨೦೧೧ (ಪುಷ್ಯ ೧೬, ಶಕ ವರ್ಷ ೧೯೩೨)	ಸಂಚಿಕೆ ೧

ಭಾಗ – ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು.

ENERGY SECRETARIAT

NOTIFICATION

No.EN 61 PSR 2010, Bangalore, Dated:25th November, 2010

In exercise of the power conferred by sub-sections (1) and (2) of section 153 of the Electricity Act, 2003 (Central Act 36 of 2003), the Government of Karnataka with the concurrence of the High Court of Karnataka hereby constitutes the Special Court specified in column (2) of the table below in respect of the areas specified in the corresponding entries in column (4) thereof and appoints the District and Sessions Judge specified in column (3) to be the Judge of the Special Court specified in the corresponding entries in column (2) thereof, for the purpose of the said section.

TABLE

Sl. No.	Name of the Court	Designation of District and Sections Judge	Areas
1	2	3	4
1.	District and Sessions Court, Yadgir	District and Sessions Judge	Yadgir District

By Order and in the Name of the Government of Karnataka,

SURESH B. KRISHNAPPANAVAR

Under Secretary to Government,

Energy Department.

PR-963

CO-OPERATION SECRETARIAT

NOTIFICATION

No.CD 59 WHC 2010, Bangalore, Dated:20th November, 2010

In exercise of the powers conferred by Clause (b) of Sub-section (1) of Section 20 of the Warehousing Corporation Act, 1962, (Central Act 58 of 1962) the Government of Karnataka hereby nominate, Sri M. Narayana Swamy, Ex.MLA, No.17,

Kyasamballi, Village & Post, Bangarpet Taluk, Kolar District as Director on the Board of Directors of the Karnataka State Warehousing Corporation, Bangalore, in place of Dr.Amita Prasad, IAS with immediate effect & until further order.

In exercise of the powers conferred by Sub-section (2) of Section 20 of the Warehousing Corporation Act, 1962, the Government of Karnataka is also pleased to appoint Sri M. Narayana Swamy, Ex.MLA, No.17, Kyasamballi, Village & Post, Bangarpet Taluk, Kolar District as Chairperson of Karnataka State Warehousing Corporation, Bangalore with immediate effect & until further Orders.

By Order and in the Name of the Government of Karnataka,

NANJUNDAPPA

PR-964

Under Secretary to Government,

Co-operation Department.

ಜಲಸಂಪನ್ಮೂಲ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಜಸಂಇ/9/ನೀಯೋವ/2010, ಬೆಂಗಳೂರು, ದಿನಾಂಕ:20ನೇ ನವೆಂಬರ್, 2010

ಕಾಡಾ ಅಧಿನಿಯಮ 1980ರ ಸೆಕ್ಷನ್ 4(2)(i) ರನ್ವಯ ಶ್ರೀ ಗಿರೀಶ್ ಮಟ್ಟೆಣ್ಣನವರ, ಗುಲ್ಬರ್ಗಾ ಇವರನ್ನು ಕಾಡಾ, ನೀರಾವರಿ ಯೋಜನಾ ವಲಯ, ಗುಲ್ಬರ್ಗಾ ಪ್ರಾಧಿಕಾರದ ಅಧಿಕಾರೇತರ ಅಧ್ಯಕ್ಷರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ವೆಂಕಟೇಶ್

ಪಿ.ಆರ್.965

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲಸಂಪನ್ಮೂಲ ಇಲಾಖೆ (ಕಾಡಾ)

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಒ 110 ಸಿಎಸ್ಎಸ್ 2010, ಬೆಂಗಳೂರು, ದಿನಾಂಕ:24ನೇ ಸೆಪ್ಟೆಂಬರ್, 2010

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ:11)ರ ಪ್ರಕರಣ 29ರ ಉಪಪ್ರಕರಣ (1)ರ ಮೇರೆಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಶ್ರೀ ಹೆಚ್.ಪಿ. ರಾಜೇಶ್ ಬಿನ್ ಪುಟ್ಟೇಗೌಡ, ಹಂಪಾಪುರ, ಬೀಕನಹಳ್ಳಿ ಅಂಚೆ, ಚಿಕ್ಕಮಗಳೂರು ಇವರನ್ನು ಚಿಕ್ಕಮಗಳೂರು ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಮಳಿಗೆ ನಿ., (ಜನತಾ ಬಜಾರ್), ಚಿಕ್ಕಮಗಳೂರು ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆವಿಗೂ ನಾಮನಿರ್ದೇಶನ ಮಾಡುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಆರ್.ಎಸ್. ನೂಲಿ

ಪಿ.ಆರ್.941

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ,

ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಒ 123 ಸಿಎಸ್ಎಸ್ 2008, ಬೆಂಗಳೂರು, ದಿನಾಂಕ:21ನೇ ಅಕ್ಟೋಬರ್, 2010

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ:11)ರ ಪ್ರಕರಣ 29ರ ಉಪಪ್ರಕರಣ (1)ರ ಮೇರೆಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಶ್ರೀ ಜಗನ್ನಾಥ್ ಕೆ.ಎಸ್. ಬಿನ್ ಸತ್ಯನಾರಾಯಣ ರಾಜು, ಗಣೇಶನಗುಡಿ ಬೀದಿ, ಕೊರಟಗೆರೆ ಟೌನ್, ತುಮಕೂರು ಜಿಲ್ಲೆ, ಇವರನ್ನು ಕೊರಟಗೆರೆ ತಾಲ್ಲೂಕಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಕೊರಟಗೆರೆ, ತುಮಕೂರು ಜಿಲ್ಲೆ, ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆವಿಗೂ ನಾಮನಿರ್ದೇಶನ ಮಾಡುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಆರ್.ಎಸ್. ನೂಲಿ

ಪಿ.ಆರ್.944

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ,

ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಒ 114 ಸಿಎನ್ಎಸ್ 2010, ಬೆಂಗಳೂರು, ದಿನಾಂಕ:21ನೇ ಅಕ್ಟೋಬರ್, 2010

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ:11)ರ ಪ್ರಕರಣ 29ರ ಉಪಪ್ರಕರಣ (1)ರ ಮೇರೆಗೆ ದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ವ್ಯಕ್ತಿಗಳನ್ನು ಕೊರಟಗೆರೆ ತಾಲ್ಲೂಕಿನ ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ ನಿ., ಕೊರಟಗೆರೆ, ತುಮಕೂರು ಜಿಲ್ಲೆ ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆವಿಗೂ ನಾಮನಿರ್ದೇಶನ ಮಾಡುತ್ತದೆ.

1) ಶ್ರೀ ನಟರಾಜು ಬಿನ್ ಕೆ. ನರಸಯ್ಯ, ಪಾತಗಾನಹಳ್ಳಿ ಅಂಚೆ, ಕೊಳಾಲ ಹೋಬಳಿ, ಕೊರಟಗೆರೆ ತಾಲ್ಲೂಕು.

2) ಶ್ರೀಮತಿ ಗಂಗಮ್ಮ ಕೋಂ ರಾಜ್‌ಕುಮಾರ್, ಸೋಮಪುರ ಅಂಚೆ, ಹೊಳವನಹಳ್ಳಿ ಹೋಬಳಿ, ಕೊರಟಗೆರೆ ತಾಲ್ಲೂಕು.

3) ಶ್ರೀ ಚಂದ್ರಶೇಖರ್ ಎನ್.ಆರ್. ಬಿನ್ ರೇಣುಕಪ್ಪ, ದೊಡ್ಡಪೇಟೆ ಬೀದಿ, ಕೊರಟಗೆರೆ ಟೌನ್.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಆರ್.ಎಸ್. ನೂಲಿ

ಪಿ.ಆರ್.945

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ, ಸಹಕಾರ ಇಲಾಖೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 14 ಎಸ್ಎಂಆರ್ 2010, ಬೆಂಗಳೂರು, ದಿನಾಂಕ:15ನೇ ನವೆಂಬರ್, 2010

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ನಿಯಮ 3ರ ಖಂಡ (ಎಫ್ಎಫ್)ನ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಸದರಿ ನಿಯಮಗಳ ಷೆಡ್ಯೂಲ್–Iರ ಐಟಂ 250ರ ನಂತರ ಈ ಕೆಳಕಂಡ ಐಟಂನ್ನು ಸೇರ್ಪಡೆಗೊಳಿಸಿದೆ:

(251) ಫೋರ್ಟಿಸ್ ಹಾಸ್ಪಿಟಲ್ಸ್ ಲಿಮಿಟೆಡ್, 14, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು–560 052.

(252) ಫೋರ್ಟಿಸ್ ಹಾಸ್ಪಿಟಲ್ಸ್ ಲಿಮಿಟೆಡ್, 154/9, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಎದುರು, ಬನ್ನೇರುಘಟ್ಟ ರಸ್ತೆ, ಬೆಂಗಳೂರು–560 076.

ಸದರಿ ನಿಯಮಗಳ ಷೆಡ್ಯೂಲ್–I ರ ಕ್ರಮಸಂಖ್ಯೆ:13ರಲ್ಲಿನ ನಮೂದುಗಳು "ವೊಕಾರ್ಡ್ ಹಾಸ್ಪಿಟಲ್ ಮತ್ತು ಹಾರ್ಟ್ ಇನ್‌ಸ್ಟಿಟ್ಯೂಟ್, 14, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು–52" ಮತ್ತು ಕ್ರಮಸಂಖ್ಯೆ:229 ರಲ್ಲಿನ ನಮೂದುಗಳು "ವೊಕಾರ್ಡ್ ಹಾಸ್ಪಿಟಲ್, 154/9, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಎದುರು, ಬನ್ನೇರುಘಟ್ಟ ರಸ್ತೆ, ಬೆಂಗಳೂರು–560 076" ಇವುಗಳನ್ನು ತೆಗೆದು ಹಾಕತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ. ಮಾರ್ಕಂಡೇಯ

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು–2)

PERSONNEL AND ADMINISTRATIVE REFORMS SECRETARIAT

NOTIFICATION

No.DPAR 14 SMR 2010, Bangalore, Dated:15th November, 2010

In exercise of the powers conferred by clause (ff) of rule 3 of the Karnataka Government Servants' (Medical Attendance) Rules, 1963, the Government of Karnataka hereby adds the following item after item 250 of Schedule I to the said rules, namely:

(251) Fortis Hospitals Ltd., 14, Cunningham Road, Bangalore-560 052.

(252) Fortis Hospitals Ltd., 154/9, Opp. Indian Institute of Management, Bannerghatta Road, Bangalore-560076.

The entries at Sl.No.13 "Wockhardt Hospital and Heart Institute, 14, Cunningham Road, Bangalore-52" and the entries at Sl.No.229 "Wockhardt Hospital, 154/9, Opp. Indian Institute of Management, Bannerghatta Road, Bangalore-560076" in the Schedule I of the said Rules shall stand deleted.

By Order and in the name of the Governor of Karnataka,

P. MARKANDEYA

PR-946

Under Secretary to Government,

Department of Personnel and Administrative Reforms (Service Rules-2)

ಜಲ ಸಂಪನ್ಮೂಲ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಜಸಂಇ/13/ಸಿಎಕೆ/2010, ಬೆಂಗಳೂರು, ದಿನಾಂಕ:20ನೇ ನವೆಂಬರ್, 2010

ಕಾಡಾ ಅಧಿನಿಯಮ 1980ರ ಸೆಕ್ಷನ್ 4(2)(i)ರನ್ವಯ ಶ್ರೀ ರಾಮಲಿಂಗಯ್ಯ, ಮಂಡ್ಯ ಇವರನ್ನು ಕಾಡಾ, ಕಾವೇರಿ ಜಲಾನಯನ ಯೋಜನೆಗಳು, ಮೈಸೂರು ಪ್ರಾಧಿಕಾರದ ಅಧಿಕಾರೇತರ ಅಧ್ಯಕ್ಷರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್.966

ವೆಂಕಟೇಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಕಾಡಾ)

ಆರ್ಥಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಇ 535 ವೆಚ್ಚ–12/09, ಬೆಂಗಳೂರು, ದಿನಾಂಕ:21ನೇ ಜುಲೈ, 2010

"ಆಡಳಿತ ಸುಧಾರಣೆಯಲ್ಲಿ ಅನುಷ್ಠಾನ ಪರ್ವ" ಕಾರ್ಯಕ್ರಮದಡಿ ಸರ್ಕಾರದ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಪರಿಶೀಲನಾ ಕಾರ್ಯಗಳನ್ನು ನಿರ್ವಹಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಿ, ಸೂಚಿತ ಸಂಸ್ಥೆಗಳಿಂದ ಸೇವಾ ಸಂಗ್ರಹಣೆಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಸರ್ಕಾರವು ಪಾರದರ್ಶಕತೆ ಕಾಯ್ದೆಯಿಂದ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆಗೆ ವಿನಾಯಿತಿ ನೀಡಿದೆ.

ಮಾರ್ಗಸೂಚಿಗಳು

1) ಕಾರ್ಯಸಾಧ್ಯತೆಯ ಪೂರ್ವ ಪರಿಶೀಲನೆ, ಕಾರ್ಯಸಾಧ್ಯತೆ ವರದಿಗಳು, ಯೋಜನಾವರದಿ ತಯಾರಿಕೆ ಮತ್ತು ವ್ಯವಹರಣೆ ಸಲಹಾ ಸೇವೆಗಳಿಗಾಗಿ ಅತಿ ಕಡಿಮೆ ವೆಚ್ಚದಲ್ಲಿಯ ಸಂಸ್ಥೆಗಳನ್ನು ಆಯ್ಕೆಮಾಡಿಕೊಳ್ಳಲು ಅನುಬಂಧ–1 ಮತ್ತು ಅನುಬಂಧ–2 ರಲ್ಲಿ ಸೂಚಿಸಿರುವ ಎರಡು ಪಟ್ಟಿಗಳಲ್ಲಿನ (panel) ಸಂಸ್ಥೆಗಳಿಂದ ಕನಿಷ್ಠ 5 ಕೊಟೇಶನ್‌ಗಳನ್ನು ಪಡೆಯಬೇಕು.
2) ಮೌಲ್ಯಮಾಪನ, ಉಸ್ತುವಾರಿ, ಸಾಂಸ್ಥಿಕ ಬಲಪಡಿಸುವಿಕೆಗಾಗಿ ಅನುಬಂಧ–3 ರಲ್ಲಿಯ ವಿಷಯಗಳಿಗೆ ಸಂಬಂಧಿಸಿದ ಇತರೆ ಸೇವೆಗಳಿಗೆ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆಯು ಅನುಬಂಧ–3ರಲ್ಲಿ ಸೂಚಿಸಿರುವ Group-A ಮತ್ತು Group-B ಸಂಸ್ಥೆಗಳಿಂದ ಕಡಿಮೆ ವೆಚ್ಚದಲ್ಲಿಯೇ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳಲು ಕನಿಷ್ಠ 3 ಕೊಟೇಶನ್‌ಗಳನ್ನು ಪಡೆಯಬೇಕು.
3) ಮೇಲ್ಕಂಡಂತೆ ತಿಳಿಸಿರುವ ಆಯ್ಕೆ ಪ್ರಕ್ರಿಯೆಗೆ ನಿರ್ವಹಿಸಿದ ಕೆಲಸ ವ್ಯಾಪ್ತಿ, ವಿವರ ಅಂತಿಮ ಫಲಿತಾಂಶ ಇತ್ಯಾದಿಗಳನ್ನೊಳಗೊಂಡ Terms of Reference (ToR) ತಯಾರಿಸಬೇಕು ಹಾಗೂ ToR ನ್ನು ಕೊಟೇಶನ್ ಕರೆಯಲು ಆಧಾರವಾಗಿಟ್ಟುಕೊಳ್ಳಬೇಕು.
4) ಸಮಾಲೋಚನಾ ಶುಲ್ಕವು ToR ಮೇಲೆ ಆಧಾರವಾಗಿರುವುದರಿಂದ, ಸಮಾಲೋಚನಾ ಶುಲ್ಕವನ್ನು ನಂತರ ನಿಗದಿಪಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಎನ್. ಚಂದ್ರಕುಮಾರ್

ಸರ್ಕಾರದ ಉಪ ಕಾರ್ಯದರ್ಶಿ,

ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

ಅನುಬಂಧ–1

1) KSIIDC-IL & FS (JV) Project Development Company Ltd., KIPDC), Bangalore.
2) Karnataka Enterprises Solution Ltd., Bangalore.
3) ICRA Management Consulting Services Ltd., New Delhi.
4) KPMG Advisory Services Pvt. Ltd., (KASPL), Gurgaon, Haryana.
5) Voyants Solution Pvt Ltd., New Delhi.
6) Infrastructure Development Corporation (Karnataka) Ltd., Bangalore.
7) Darashaw & Company Pvt Ltd., Chennai.
8) SREI Infrastructure Finance Ltd., Kolkata.
9) YES BANK LTD., Gurgaon, Haryana.

ಅನುಬಂಧ–2

1) Abacus Legal Group, India, New Delhi.
2) CRISIL Infrastructure Advisory India, Mumbai.
3) Deloitee Touche Tohmatsu India Pvt. Ltd., India, New Delhi.

4) Ernst & Young Pvt. Ltd., India, Kolkata.
5) Feedback Ventures Pvt. Ltd., India, New Delhi.
6) Grant Thornton UK LLP London, United Kingdom.
7) Infrastructure Development Finance Company (IDFC) Ltd., India, Chennai.
8) Infrastructure Leasing and Financial Services (IL & FS), India, Mumbai.
9) International Finance Corporation, New Delhi.
10) Pricewaterhouse Coopers Pvt.Ltd., India, Kolkata.
11) RITES Ltd., India, Gurgaon, Haryana.

ಅನುಬಂಧ–3

a) Concurrent Evaluation of GoK Programmes/ Schemes/ Projects (twice a year/ six monthly or biannual)
b) Programme/ Project Scheme evaluation one time either after the completion of the project or once in two years or after two years.
c) Activities related to Programme, Policy and Documentation:
   Institutional strengthening and capacity buildling
   Programme development and programme monitoring
   Publication of reports and documents

The Institutions which provide above services are listed and classified into two groups as below:

Group-A

1) Infrastructure Development Corporation (Karnataka) Ltd., (iDeCK)
2) Karnataka State Industrial Investment & Development Corporation Ltd., (KSIIDC)
3) Karnataka State Financial Corporation Ltd.,
4) Technical Consultancy (Karnataka) Services Ltd., (TECSOK).
5) The Energy Research Institute.
6) Indian Institute of Management, Bangalore.
7) Indian Institute of Science, Bangalore
8) Indian Institute for Social & Economic Change, Bangalore.

Group-B

1) Administrative Training Institute, Mysore.
2) Centre for Policy Research, Bangalore (CPR)
3) Centre for Public Policy, Bangalore (CPP)
4) Environment Management & Policy Institute, Bangalore (EMPRI)
5) National Law School of India University, Bangalore (NLSIU), Bangalore.
6) University Visvesvaraya College of Engineering (UVCE).
7) The Indian Institute of Planning and Management (IIPM).
8) Center for Multi-Disciplinary Development Research, Dharwad (CMDR)
9) University of Agricultural Sciences, Dharwad.
10) State Institute for Rural Development, Dharwad (SIRD)
11) Karnataka Horticulture University, Bijapur (KHU).
12) Institute of Communication Practice, Bangalore (ICP).
13) Government Institute of Printing Technology, Bangalore (GIPT)
14) Government Institute of Textile Technology, Bangalore (GITT)
15) Institute of Development Studies, Mysore University, Mysore.

ಎನ್. ಚಂದ್ರಕುಮಾರ್
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

ಪಿ.ಆರ್.967

ಆರ್ಥಿಕ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಆಇ 893 ವೆಚ್ಚ–12/10, ಬೆಂಗಳೂರು, ದಿನಾಂಕ:28ನೇ ಅಕ್ಟೋಬರ್, 2010

ಅಧಿಸೂಚನೆ ಸಂಖ್ಯೆ: ಆಇ 535 ವೆಚ್ಚ–12/2009, ದಿನಾಂಕ:21.07.2009ರ 5ನೇ ಸಾಲಿನಲ್ಲಿ ಇರುವ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಗೆ' ಎಂಬ ಪದಗಳನ್ನು ಕೈ ಬಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಹೆಚ್. ಶೇಖರಪ್ಪ

ಪಿ.ಆರ್.968

ಸರ್ಕಾರದ ಅಧೀನ ಕಾರ್ಯದರ್ಶಿ,

ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

KARNATAKA GOVERNOR'S SECRETARIAT

NOTIFICATION

No.GS 3 AUR 2010, Bangalore, Dated:2nd December, 2010

WHEREAS, the Board of Management, University of Agricultural Sciences, Raichur was constituted in terms of Section 12(1) of the University of Agricultural Sciences Act, 2009 vide Notification No.GS 3 AUR 2010, Dated 20th May, 2010.

WHEREAS, in the above Notification the positions under Section 12(2) (vi) and (viii) were kept vacant for want of appropriate proposals from the Government.

WHEREAS, the State Government has now conveyed its nominee on the Board of Management, University of Agricultural Sciences, Raichur, as per the provisions of Section 12(2)(vi) and two nominees of Karnataka State Legislative Assembly nominated by the Speaker and one nominee of Karnataka State Legislative Council nominated by the Chairman as per the provisions of Section 12(2)(viii) of the University of Agricultural Sciences Act, 2009.

NOW, THEREFORE, I, H.R. BHARDWAJ, Governor of Karnataka and Chancellor of the University of Agricultural Sciences, Raichur, in exercise of the powers conferred under Section 12(1) of the University of Agricultural Sciences Act, 2009 hereby appoint the following persons on the Board of Management of the University of Agricultural Sciences, Raichur.

Section	Category	Sl.No.	Persons appointed
12(2)(vi)	One person, not being a Government Servant or servant of the University by the State Government from among Graduates of not less than five years standing of the University.	6	Sri G. Thimmannagouda Patil, S/o Shivabasanagouda Patil, Maski Post, Lingasagur Taluk, Raichur District.
12(2)(viii)	Two members of the Karnataka State Legislative Assembly to be nominated by the Speaker and one member of the Karnataka Legislative Council to be nominated by the Chairman.	12	1) Sri Maleekayya Venkayya Guthedar, MLA, No.323, 1st Block, 3rd Stage, West of Chord Road, Basaveshwarnagar, Bangalore-560079.
		13	2) Sri M.S. Somalingappa, MLA, Valmikinagar, Tekkalakote, Shiraguppa Taluk, Bellary District.
		14	3) Sri Allammaprabhu Patil, MLC, Naloge Post, Jevargi Taluk, Gulbarga District.

The term of office of the above members shall be until 19.05.2013.

H.R. BHARDWAJ

Governor of Karnataka and

Chancellor of the Universities.

PR-969

V.S. JERE

Under Secretary to Governor.

ಆರ್ಥಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಇ 984 ವೆಚ್ಚ–12/10, ಬೆಂಗಳೂರು, ದಿನಾಂಕ:27ನೇ ನವೆಂಬರ್, 2010

ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತರಕ್ಷಣಾ ಅಧಿನಿಯಮ, 2004ರ ಅಡಿ ಮೆ: ವಿನಿವಿಂಕ್ ಸಂಸ್ಥೆಯ ಆಸ್ತಿಗಳ ಹರಾಜಿನಿಂದ ಬಂದ ಮೊತ್ತವನ್ನು ಸಂಸ್ಥೆಯ ಠೇವಣಿದಾರರಿಗೆ ಹಂಚುವ ಮುನ್ನ ಠೇವಣಿದಾರರ ಹಕ್ಕುಗಳನ್ನು ಪರಿಶೀಲನೆ ಮಾಡುವ ಕಾರ್ಯವನ್ನು ಸುಮಾರು ರೂ.22.5 ಲಕ್ಷದಿಂದ ರೂ.27.5 ಲಕ್ಷದವರೆಗಿನ ಸೇವಾ ಶುಲ್ಕ ವೆಚ್ಚದಲ್ಲಿ ಮೆ: ಕೆ.ವಿ. ನರಸಿಂಹನ್ ಅಂಡ್ ಕೋ, ಚಾರ್ಟರ್ಡ್ ಅಕೌಂಟೆಂಟ್ಸ್‌ರವರಿಗೆ ನೇರವಾಗಿ ನೀಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ–1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಆರ್ಥಿಕ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಮೆ: ಕೆ.ವಿ. ನರಸಿಂಹನ್ ಅಂಡ್ ಕೋ, ಚಾರ್ಟರ್ಡ್ ಅಕೌಂಟೆಂಟ್ಸ್‌ರವರಿಂದ ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಆರ್ಥಿಕ ಇಲಾಖೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಹೆಚ್. ಶೇಖರಪ್ಪ

ಪಿ.ಆರ್.970

ಸರ್ಕಾರದ ಅಧೀನ ಕಾರ್ಯದರ್ಶಿ,

ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಅಪಜೀ 110 ಎಫ್‌ಪಿಸಿ 2010, ಬೆಂಗಳೂರು, ದಿನಾಂಕ:22ನೇ ನವೆಂಬರ್, 2010

ಶ್ರೀ ವಿನೋದ ಪ್ರಭು, ಕುಮಟ, ಉತ್ತರ ಕನ್ನಡ ಜಿಲ್ಲೆ ಇವರನ್ನು ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ, ಮಂಗಳೂರು ಇದರ ಆರ್ಟಿಕಲ್ಸ್ ಆಫ್ ಅಸೋಸಿಯೇಶನ್‌ನ ಆರ್ಟಿಕಲ್ 24ರನ್ವಯ ಸದರಿ ನಿಗಮದ ಆಡಳಿತ ಮಂಡಳಿಯ ಅಧ್ಯಕ್ಷರು ಹಾಗೂ ನಿರ್ದೇಶಕರನ್ನಾಗಿ ತಕ್ಷಣವೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. ಕಲಾವತಿ

ಪಿ.ಆರ್.971

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

EDUCATION SECRETARIAT

NOTIFICATION

No.ED 44 TEC 2010, Bangalore, Dated:25th November, 2010

Whereas, a Committee for Fixation of Fee Structure for the students admitted into the professional courses has been constituted under the Chairmanship of the Hon'ble Justice B. Padmaraj, Retired Judge of the Hon'ble High Court of Karnataka by Government Order No.ED44 TEC 2010 Dated:24.05.2010 in compliance with the ruling contained in the judgment Dated:14.08.2003 in W.P. (Civil) No.350 of 1993 in Islamic Academy of Education and another Vs. State of Karnataka and others.

And whereas a representative nominated by the Medical Council of India shall be a Member of the Committee.

The Medical Council of India has nominated Dr. G.D. Ravindran, Prof. of General Medicine, St.John Medical College, Bangalore to be a member of the said Committee.

Now, therefore, the Chairman of the Committee in exercise of the powers conferred on him by virtue of the said judgement Dated:14.08.2003, has accepted the nomination of Dr. G.D. Ravindran, Prof. of General Medicine, St.John Medical College, Bangalore, as a member of the said Committee with effect from 12.11.2010 and until further orders.

By Order and in the name of the Governor of Karnataka

PR-972

B.N. JAGADEESH

Under Secretary to Government,

Education Department. (Technical Education)

EDUCATION SECRETARIAT

NOTIFICATION

No.ED 44 TEC 2010, Bangalore, Dated:25th November, 2010

Whereas, a Committee for Fixation of Fee Structure for the students admitted into the professional courses has been constituted under the Chairmanship of the Hon'ble Justice B. Padmaraj, Retired Judge of the Hon'ble High Court of Karnataka by

Government Order No.ED44 TEC 2010 Dated:24.05.2010 in compliance with the ruling contained in the judgment Dated:14.08.2003 in W.P. (Civil) No.350 of 1993 in Islamic Academy of Education and another Vs. State of Karnataka and others.

And whereas a representative nominated by the All India Council of Technical Education (AICTE) shall be a Member of the Committee.

AICTE has nominated Dr. Renu Bapna, Advisor, AICTE, New Delhi to be a member of the said Committee.

Now, therefore, the Chairman of the Committee in exercise of the powers conferred on him by virtue of the said judgement Dated:14.08.2003, has accepted the nomination of Dr. Renu Bapna, Advisor, AICTE, New Delhi, as a member of the said Committee with effect from 12.11.2010 and until further orders.

By Order and in the name of the Governor of Karnataka

B.N. JAGADEESH

PR-973

Under Secretary to Government,

Education Department. (Technical Education)

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 72 ಪಿಐಎಫ್ 2010, ಬೆಂಗಳೂರು, ದಿನಾಂಕ:25ನೇ ನವೆಂಬರ್, 2010

ಶ್ರೀ ಎಂ. ರುದ್ರೇಶ್, ಸೋಂಪುರ, ಬೆಂಗಳೂರು ದಕ್ಷಿಣ ತಾಲ್ಲೂಕು, ಇವರನ್ನು ಶ್ರೀ ಕಂಠೀರವ ಸ್ಟುಡಿಯೋ ನಿಯಮಿತ, ಬೆಂಗಳೂರು ಇದರ ನಿರ್ದೇಶಕರ ಮಂಡಳಿಯಲ್ಲಿ ನಿರ್ದೇಶಕರನ್ನಾಗಿ ಹಾಗೂ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದನ್ನು ದಿನಾಂಕ:22.11.2010ರ ಅಧಿಸೂಚನೆ ಸಂಖ್ಯೆ: ಕಸಂವಾಪ್ರ 72 ಪಿಐಎಫ್ 2010ರಲ್ಲಿ ರದ್ದುಪಡಿಸಿರುವ ಆದೇಶವನ್ನು ಹಿಂತೆಗೆದುಕೊಂಡು, ಸದರಿಯವರನ್ನು ಶ್ರೀ ಕಂಠೀರವ ಸ್ಟುಡಿಯೋ ನಿಯಮಿತ, ಬೆಂಗಳೂರು ಇದರ ಅಧ್ಯಕ್ಷರನ್ನಾಗಿ ಪುನರ್ ನೇಮಕಾತಿ ಮಾಡಿ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ. ಸುಧಾಕರ ಶೆಟ್ಟಿ

ಪಿ.ಆರ್.975

ಸರ್ಕಾರದ ಉಪ ಕಾರ್ಯದರ್ಶಿ,

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

FOREST, ECOLOGY AND ENVIRONMENT SECRETARIAT

NOTIFICATION

No.FEE 98 FEG 2010, Bangalore, Dated:16th November, 2010

The following officer of the Forest Department is confirmed under rule 19 of Karnataka Civil Services (General Recruitment) Rules, 1977, in the cadre of Assistant Conservator of Forests with effect from the dates mentioned against his name in permanent vacancies available to him in the department in accordance with the Seniority List of Assistant Conservator of Forests published vide Notification No.FEE 33 FEG 2002, Dated:22.03.2005.

Sl. No.	Name of the Officers	Gradation in the Seniority List	Date of Confirmation
1	2	3	4
1.	Sri Gopal Singh H.	335	17.08.2005

By Order and in the name of the Governor of Karnataka

VADAGAVE BASAVARAJ

PR-976

Under Secretary to Government,

Forest, Ecology & Environment Department (Services)

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 316 ಎಲ್ಇಟಿ 2010(1), ಬೆಂಗಳೂರು, ದಿನಾಂಕ:30ನೇ ನವೆಂಬರ್, 2010

ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 (ಕೇಂದ್ರ ಕಾಯ್ದೆ 61–1986) ಕಲಂ 17ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕಾರ್ಮಿಕ ಇಲಾಖೆಯ ಅಧಿಕಾರಿಗಳನ್ನು ಹೊರತುಪಡಿಸಿ, ಸರ್ಕಾರದ ಇತರೆ ಇಲಾಖೆಗಳ ಅಧಿಕಾರಿಗಳನ್ನು "ನಿರೀಕ್ಷಕರನ್ನಾಗಿ" ನೇಮಕ ಮಾಡಿ, ಸರ್ಕಾರ ಅಧಿಸೂಚನೆ ಸಂಖ್ಯೆ: ಕಾಇ 61 ಸಿಎಲ್ಸಿ 2001, ದಿನಾಂಕ:22.09.2001ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ದಿನಾಂಕ:22.09.2001ರಂದು ಹೊರಡಿಸಿದ್ದ ಅಧಿಸೂಚನೆಯನ್ನು ಭಾಗಶಃ ಮಾರ್ಪಾಡು ಮಾಡಿ ಈ ಕೆಳಗಿನ ಕೋಷ್ಟಕದ 2ನೇ

ಅಂಕಣದಲ್ಲಿ ನಮೂದಿಸಿರುವ ರಾಜ್ಯದ ವಿವಿಧ ಇಲಾಖೆಗಳ ಅಧಿಕಾರಿಗಳನ್ನು "ನಿರೀಕ್ಷಕರನ್ನಾಗಿ" ತಕ್ಷಣದಿಂದ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ. ಕೋಷ್ಟಕದ 2ನೇ ಅಂಕಣದಲ್ಲಿ ನಮೂದಿಸಿರುವ ಅಧಿಕಾರಿಗಳು ಆಯಾ ಇಲಾಖೆಗಳು ನಿರ್ದಿಷ್ಟಪಡಿಸಿರುವ ಕಾರ್ಯವ್ಯಾಪ್ತಿ ಒಳಗೆ ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ನ್ನು (ಕೇಂದ್ರ ಕಾಯ್ದೆ 61–1986ನ್ನು) ಅವರವರ ಕಾರ್ಯವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಕೋಷ್ಟಕ

ಕ್ರ ಸಂ.	ಇಲಾಖೆ ಮತ್ತು ಅಧಿಕಾರಿಗಳ ಪದನಾಮ
1.	ಕಂದಾಯ ಇಲಾಖೆ: 1. ತಹಶೀಲ್ದಾರ್‌ಗಳು 2. ನಾಡ ಕಛೇರಿಗಳ ಉಪ ತಹಶೀಲ್ದಾರ್‌ಗಳು 3. ರೆವಿನ್ಯೂ ಇನ್‌ಪೆಕ್ಟರ್‌ಗಳು
2.	ಪಂಚಾಯತ್ ರಾಜ್ ಇಲಾಖೆ: 1. ಕಾರ್ಯನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್ 2. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.
3.	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ: 1. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು 2. ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು
4.	ಶಿಕ್ಷಣ ಇಲಾಖೆ 1. ಕ್ಷೇತ್ರ ಶಿಕ್ಷಣಾಧಿಕಾರಿಗಳು 2. ಬ್ಲಾಕ್ ರಿಸೋರ್ಸ್ ಕೋ–ಆರ್ಡಿನೇಟರ್ 3. ಸರ್ವ ಶಿಕ್ಷಣ ಅಭಿಯಾನ ಅಧಿಕಾರಿಗಳು
5.	ಕಾರ್ಖಾನೆ ಮತ್ತು ಬಾಯ್ಲರ್‌ಗಳ ಇಲಾಖೆ 1. ಉಪ ನಿರ್ದೇಶಕರು 2. ಹಿರಿಯ ಸಹಾಯಕ ನಿರ್ದೇಶಕರುಗಳು 3. ಸಹಾಯಕ ನಿರ್ದೇಶಕರುಗಳು
6.	ನಗರಾಭಿವೃದ್ಧಿ ಇಲಾಖೆ 1. ನಗರಸಭೆ ಆಯುಕ್ತರು 2. ಮುಖ್ಯಾಧಿಕಾರಿಗಳು 3. ಹೆಲ್ತ್ ಇನ್ಸ್‌ಪೆಕ್ಟರ್‌ಗಳು 4. ರೆವಿನ್ಯೂ ಇನ್‌ಪೆಕ್ಟರ್‌ಗಳು
7.	ರೇಷ್ಮೆ ಇಲಾಖೆ 1. ರೇಷ್ಮೆ ಕೃಷಿ ವಿಸ್ತರಣಾಧಿಕಾರಿಗಳು 2. ರೇಷ್ಮೆ ಕೃಷಿ ಸಹಾಯಕ ನಿರ್ದೇಶಕರುಗಳು
8.	ಸಮಾಜ ಕಲ್ಯಾಣ ಇಲಾಖೆ: ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳು
9.	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ವಿಸ್ತರಣಾಧಿಕಾರಿಗಳು
10.	ಕೃಷಿ ಇಲಾಖೆ: 1. ಸಹಾಯಕ ನಿರ್ದೇಶಕರುಗಳು 2. ಕೃಷಿ ಅಧಿಕಾರಿಗಳು
11.	ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ 1. ಸಹಾಯಕ ನಿರ್ದೇಶಕರು 2. ಕೈಗಾರಿಕಾ ವಿಸ್ತರಣಾಧಿಕಾರಿಗಳು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಯು.ಎನ್. ನಾಗೇಂದ್ರ

ಸರ್ಕಾರದ ಅಧೀನ ಕಾರ್ಯದರ್ಶಿ,

ಕಾರ್ಮಿಕ ಇಲಾಖೆ.

ಪಿ.ಆರ್.979

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಹಾಗೂ ಪ್ರವಾಸೋದ್ಯಮ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 127 ಕೆಎಂಯು 2008, ಬೆಂಗಳೂರು, ದಿನಾಂಕ:29ನೇ ನವೆಂಬರ್, 2010

ಕರ್ನಾಟಕ ಸರ್ಕಾರವು ಪರಿವಿಡಿಯಲ್ಲಿ ವಿವರಿಸಿರುವ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು, ದಾವಣಿಬೈಲು–ಮರಗಳಲೇ ಗ್ರಾಮದಲ್ಲಿರುವ ಶ್ರೀ ಕಪಿಲೇಶ್ವರ ದೇವಸ್ಥಾನವನ್ನು "ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ನಿವೇಶನಗಳು ಮತ್ತು ಅವಶೇಷಗಳು ಅಧಿನಿಯಮ, 1961ರ ಕಲಂ 4(1)ರ" (ಕರ್ನಾಟಕ ಆಕ್ಟ್ ಆಫ್ 1962) ಅಡಿಯಲ್ಲಿ ರಾಜ್ಯ ಸಂರಕ್ಷಿತ ಸ್ಮಾರಕವನ್ನಾಗಿ ಘೋಷಿಸಲು ಅಭಿಪ್ರಾಯಪಟ್ಟು ದಿನಾಂಕ:26.06.2010ರಂದು ಬಾಧಿತರಾದವರಿಂದ ಆಕ್ಷೇಪಣೆಗಳನ್ನು 60 ದಿನಗಳೊಳಗಾಗಿ ಸಲ್ಲಿಸುವಂತೆ ಅಧಿಸೂಚನೆ ಸಂಖ್ಯೆ: ಕಸಂವಾಪ್ರ 127 ಕೆಎಂಯು 2008ನ್ನು ಹೊರಡಿಸಲಾಗಿತ್ತು. ಸದರಿ ಸೂಚಿಸಿದ ಅಧಿಸೂಚನೆಯು ದಿನಾಂಕ:05.08.2010ರ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾಗಿದ್ದು, ಇದುವರೆಗೂ ಯಾವ ಆಕ್ಷೇಪಣೆಗಳು ಬಂದಿರುವುದಿಲ್ಲ.

"ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ನಿವೇಶನಗಳು ಮತ್ತು ಅವಶೇಷಗಳ ಅಧಿನಿಯಮ 1961ರ ಕಲಂ 4(3)" ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಪರಿವಿಡಿಯಲ್ಲಿ ವಿವರಿಸಿರುವ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕು, ದಾವಣಿಬೈಲು–ಮರಗಳಲೇ ಗ್ರಾಮದಲ್ಲಿರುವ ಶ್ರೀ ಕಪಿಲೇಶ್ವರ ದೇವಸ್ಥಾನವನ್ನು "ರಾಜ್ಯ ಸಂರಕ್ಷಿತ ಪಾರಂಪರಿಕ ಸ್ಮಾರಕ" ವೆಂದು ಈ ಮೂಲಕ ಘೋಷಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಹೆಚ್.ವಿ. ರಾಮಚಂದ್ರರಾವ್
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.
(ಆಡಳಿತ ಕನ್ನಡ) (ಪ್ರ)

ಪರಿವಿಡಿ

(ಅಧಿಸೂಚನೆ ಸಂಖ್ಯೆ: ಕಸಂವಾಪ್ರ 127 ಕೆಎಂಯು 2008 ದಿನಾಂಕ:29.11.2010)

ಜಿಲ್ಲೆ	ತಾಲ್ಲೂಕು	ಇರುವ ಸ್ಥಳ	ಸ್ಮಾರಕ/ ಕಟ್ಟಡದ ಹೆಸರು	ಸಂರಕ್ಷಣೆಗೆ ಒಳಪಡ ಬಹುದಾದ ರೆವಿನ್ಯೂ ನಿವೇಶನ	ವಿಸ್ತೀರ್ಣ	ಮೇರೆಗಳು (ಚಕ್ಕುಬಂದಿ)		ಒಡೆತನ	ಷರಾ
1	2	3	4	5	6	7		8	9
ಶಿವಮೊಗ್ಗ	ತೀರ್ಥಹಳ್ಳಿ	ದಾವಣಿಬೈಲು– ಮರಗಳಲೇ ಗ್ರಾಮ	ಕಪ್ಪಗೋಡು ಕಪಿಲೇಶ್ವರ ದೇವಸ್ಥಾನ	ಸರ್ಕಾರಿ ಸ.ನಂ.6 ಸರ್ಕಾರಿ ಸೊಪ್ಪಿನಬೆಟ್ಟ ಅಂದಾಜು 2 ಎಕರೆ	ದೇವಸ್ಥಾನದ ಅಳತೆ 73'x50'	ಪೂರ್ವಕ್ಕೆ:	ಸ.ನಂ.6 ಮತ್ತು ಕೆರೆ	ಸರ್ಕಾರಿ ಒಡೆತನ	ಸುಮಾರು 800 ವರ್ಷಗಳಷ್ಟು ಪ್ರಾಚೀನವಾದ ವಿಶಿಷ್ಟ ಶಿಲ್ಪಕಲೆಯುಳ್ಳ ದೇವಾಲಯವಾಗಿದೆ.
						ಪಶ್ಚಿಮಕ್ಕೆ:	ಪಂಚಾಯ್ತಿ ರಸ್ತೆ ಸರ್ಕಾರಿ ಜಾಗ		
						ಉತ್ತರಕ್ಕೆ:	ಸ.ನಂ.6 ಸರ್ಕಾರಿ ಜಾಗ		
						ದಕ್ಷಿಣಕ್ಕೆ:	ಸರ್ಕಾರಿ ಜಾಗ		

ಹೆಚ್.ವಿ. ರಾಮಚಂದ್ರರಾವ್
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.
(ಆಡಳಿತ ಕನ್ನಡ) (ಪ್ರ)

ಪಿ.ಆರ್.980

ಸಹಕಾರ ಸಚಿವಾಲಯ

ಅಧಿಸೂಚನೆ ಸಂಖ್ಯೆ: ಸಿಒ 19 ಸಿಎನ್‌ಎಸ್ 2010, ಬೆಂಗಳೂರು, ದಿನಾಂಕ:20ನೇ ನವೆಂಬರ್, 2010

ಈ ಹಿಂದೆ ಸರ್ಕಾರದಿಂದ ಮಾಡಿರುವ ಎಲ್ಲಾ ನಾಮನಿರ್ದೇಶನಗಳನ್ನು ರದ್ದುಪಡಿಸಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ 11)ರ ಪ್ರಕರಣ 29ರ ಉಪ ಪ್ರಕರಣ (1)ರ ಮೇರೆಗೆ ದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಶ್ರೀ ಬಾಲಾಜಿ ಕೊಂಡಬಾ ವಾಡೆಕರ ಬೆಳಕುಣಿ (ಬಿ), ಔರಾದ್ ತಾಲ್ಲೂಕು, ಬೀದರ್ ಜಿಲ್ಲೆ ಇವರನ್ನು ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆವಿಗೂ ನಾಮನಿರ್ದೇಶನ ಮಾಡುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಆರ್.ಎಸ್. ನೂಲಿ
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿ ಕಾರ್ಯದರ್ಶಿ, ಸಹಕಾರ ಇಲಾಖೆ.

ಪಿ.ಆರ್.981

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಸಚಿವಾಲಯ
ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 66 ಕೆಎಂಯು 2009, ಬೆಂಗಳೂರು, ದಿನಾಂಕ:09.12.2010

ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ಅಧಿನಿಯಮ, 2002ರ (2003ರ ಕರ್ನಾಟಕ ಅಧಿನಿಯಮ ಸಂಖ್ಯೆ 18) 33ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಚಿಸಲು ಉದ್ದೇಶಿಸಿರುವ ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ನಿಯಮಗಳು, 2010ರ ಕರಡನ್ನು, ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳ ಮಾಹಿತಿಗಾಗಿ ಸದರಿ ಅಧಿನಿಯಮದ 33ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೂಲಕ ಅಗತ್ಯಪಡಿಸಿದಂತೆ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳ ತರುವಾಯ ಅದನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ನೋಟೀಸು ನೀಡಲಾಗಿದೆ.

ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮುಂಚೆ, ಯಾರೇ ವ್ಯಕ್ತಿಯು ರಾಜ್ಯ ಸರ್ಕಾರಕ್ಕೆ ಸಲ್ಲಿಸಬಹುದಾದ ಯಾವುದೇ ಆಕ್ಷೇಪಣೆಯನ್ನು ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು.

ಕರಡು ನಿಯಮಗಳು

ಅಧ್ಯಾಯ –I

ಪ್ರಾರಂಭಿಕ

1. ಶೀರ್ಷಿಕೆ ಮತ್ತು ಪ್ರಾರಂಭ.– (1) ಈ ನಿಯಮಗಳನ್ನು ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ನಿಯಮಗಳು, 2010 ಎಂದು ಕರೆಯತಕ್ಕದ್ದು.

(2) ಅವು, ರಾಜ್ಯಪತ್ರದಲ್ಲಿ ಅವುಗಳನ್ನು ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2.ಪರಿಭಾಷೆಗಳು.–ಈ ನಿಯಮಗಳಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(i) "ಅಧಿನಿಯಮ" ಎಂದರೆ, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ಅಧಿನಿಯಮ, 2002 (2003ರ ಕರ್ನಾಟಕ ಅಧಿನಿಯಮ ಸಂಖ್ಯೆ 18);

(ii) "ನಮೂನೆ" ಎಂದರೆ, ಈ ನಿಯಮಗಳಿಗೆ ಅನುಬಂಧಿಸಲಾದ ನಮೂನೆ;

(iii) "ಸರ್ಕಾರ" ಎಂದರೆ, ಕರ್ನಾಟಕ ರಾಜ್ಯ ಸರ್ಕಾರ;

(iv) "ಪ್ರಕರಣ" ಎಂದರೆ, ಅಧಿನಿಯಮದ ಪ್ರಕರಣ;

(v) "ಭಾ.ಪು.ಸ" ಎಂದರೆ, ಭಾರತ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ);

(vi) "ಪು.ಮ.ವ.ಸಂ" ಎಂದರೆ, ಪುರಾತತ್ವ ಮತ್ತು ವಸ್ತು ಸಂಗ್ರಹಾಲಯಗಳ ಇಲಾಖೆ, (ಡಿಎಎಂ) ಕರ್ನಾಟಕ ಸರ್ಕಾರ.

ಅಧ್ಯಾಯ –II

ಪ್ರಾಧಿಕಾರದ ಭದ್ರತಾ ದಳ

3. ಪ್ರಾಧಿಕಾರದ ಭದ್ರತಾ ದಳ.–ಪ್ರಾಧಿಕಾರದ ಭದ್ರತಾ ದಳವು, ಅಧ್ಯಕ್ಷರ ಅಧೀಕ್ಷಣೆ ಮತ್ತು ನಿಯಂತ್ರಣದ ಅಡಿಯಲ್ಲಿ ಅಧಿನಿಯಮದಲ್ಲಿ ಮತ್ತು ಈ ನಿಯಮಗಳಲ್ಲಿ ಹೇಳಿರುವ ಭದ್ರತಾ ವಿಷಯಗಳಿಗೆ ಸಂಬಂಧಪಡುವಷ್ಟರಮಟ್ಟಿಗೆ ಪ್ರಾಧಿಕಾರಕ್ಕೆ ನೆರವು ನೀಡತಕ್ಕದ್ದು.

4. ಪ್ರಾಧಿಕಾರದ ಭದ್ರತಾ ದಳದ ಮುಖ್ಯಸ್ಥನ ಕರ್ತವ್ಯಗಳು.– ಅಧಿನಿಯಮದ ಅಥವಾ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ (1963ರ ಕರ್ನಾಟಕ ಅಧಿನಿಯಮ ಸಂಖ್ಯೆ 11) ಉಪಬಂಧಗಳನ್ನು ಅಥವಾ ಅದರ ಮೇರೆಗೆ ರಚಿಸಿದ ಯಾವುವೇ ನಿಯಮಗಳನ್ನು ಅಥವಾ ಉಪ–ವಿಧಿಗಳನ್ನು ಉಲ್ಲಂಘಿಸಿ ಯಾವುದೇ ಅಪರಾಧ ಎಸಗಲು ಮಾಡಿದ ಪ್ರಯತ್ನಗಳ ಬಗ್ಗೆ ಅಧ್ಯಕ್ಷರಿಗೆ ಕೂಡಲೇ ಮಾಹಿತಿ ನೀಡಿ ವರದಿಗಳನ್ನು ಕಳುಹಿಸುವುದು ಪ್ರಾಧಿಕಾರ ಭದ್ರತಾ ದಳದ ಮುಖ್ಯಸ್ಥನ ಕರ್ತವ್ಯವಾಗಿರತಕ್ಕದ್ದು.

5. ಪ್ರಾಧಿಕಾರದ ಭದ್ರತಾ ದಳದ ಅಧಿಕಾರಗಳು ಮತ್ತು ಪ್ರಕಾರ್ಯಗಳು.– ಈ ಮುಂದಿನವುಗಳು ಪ್ರಾಧಿಕಾರದ ಭದ್ರತಾ ದಳದ ಕರ್ತವ್ಯಗಳಾಗಿರತಕ್ಕದ್ದು,–

(1) (ಎ) ಅತಿಕ್ರಮಣವನ್ನು ತಡೆಗಟ್ಟುವುದನ್ನೂ ಒಳಗೊಂಡಂತೆ ಪ್ರಾಧಿಕಾರಕ್ಕೆ ಸೇರಿದ ಯಾವುದೇ ಭೂಮಿಯ ಮೇಲಿನ ಅನಧಿಕೃತ ಅಧಿಭೋಗಕ್ಕೆ;

(ಬಿ) ಪ್ರಾಧಿಕಾರಕ್ಕೆ ಸೇರಿದ ಭೂಮಿಯಲ್ಲಿ ಅನಧಿಕೃತ ಕಟ್ಟಡಗಳ ನಿರ್ಮಾಣಕ್ಕೆ ಮತ್ತು ಲೇಔಟ್‌ಗಳ ನಿರ್ಮಾಣಕ್ಕೆ;

(ಸಿ) ವಿಭಾಗೀಯ ವಿನಿಯಮಗಳ ಉಪಬಂಧಗಳನ್ನು ಅಥವಾ ಪ್ರಾಧಿಕಾರವು ಅನುಮೋದಿಸಿದ ನಕ್ಷೆಯನ್ನು ಉಲ್ಲಂಘಿಸಿ ನಿರ್ಮಿಸಿದ ಕಟ್ಟಡಗಳಿಗೆ;

(ಡಿ) ಸ್ಥಳೀಯ ಯೋಜನಾ ಪ್ರದೇಶದೊಳಗೆ ಪ್ರಾಧಿಕಾರದ ಪೂರ್ವಾನುಮೋದನೆ ಪಡೆಯದೆ, ಈ ಅಧಿನಿಯಮದ ಮತ್ತು ಈ ಮುಂದಿನ ಅಧಿನಿಯಮಗಳ, ಎಂದರೆ:–

(i) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ ಸಂಖ್ಯೆ 11)

(ii) ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 22)

(iii) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)

(iv) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 (1964ರ ಕರ್ನಾಟಕ ಅಧಿನಿಯಮ ಸಂಖ್ಯೆ 12)

– ಇವುಗಳ ಮೇರೆಗೆ ಅಪರಾಧವೆನಿಸುವ ಭೂ ಬಳಕೆಯ ಬದಲಾವಣೆ ಎಂದು ಪರಿಗಣಿತವಾಗುವ ನಿರ್ಮಾಣಗಳಿಗೆ,

– ಸಂಬಂಧಪಟ್ಟಂಥ ಯಾವುದೇ ಅಪರಾಧ ಮಾಡುವುದನ್ನು ಅಥವಾ ಮಾಡಲು ಪ್ರಯತ್ನಿಸುವುದನ್ನು ಅಥವಾ ಅಪರಾಧ ಮಾಡಲು ಒಳಸಂಚು ಮಾಡುವುದನ್ನು ಪತ್ತೆಹಚ್ಚುವುದು ಮತ್ತು ಅಪರಾಧದಲ್ಲಿ ತೊಡಗಿರುವ ವ್ಯಕ್ತಿಗಳನ್ನು ಗುರುತಿಸುವುದು ಅವರ ಬಗ್ಗೆ ತನಿಖೆ ನಡೆಸುವುದು ಮತ್ತು ಕ್ರಮ ಜರುಗಿಸುವುದು.

(2) ಪ್ರಾಧಿಕಾರದ ಭದ್ರತಾ ದಳವು, ಪ್ರಾಧಿಕಾರವು ನಿರ್ಧರಿಸಿದಂತೆ ಅವಶ್ಯವಿರುವೆಡೆಗಳಲ್ಲೆಲ್ಲಾ ಸ್ಮಾರಕಗಳ ಸುತ್ತಮುತ್ತಲೂ ರಾತ್ರಿ ಗಸ್ತಿಗೆ ವ್ಯವಸ್ಥೆ ಮಾಡತಕ್ಕದ್ದು.

(3) ಭದ್ರತಾ ದಳವು, ಭಾರತ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಭದ್ರತಾ ವಿಭಾಗದೊಂದಿಗೆ ಪುರಾತತ್ವ ಮತ್ತು ವಸ್ತು ಸಂಗ್ರಹಾಲಯಗಳ ಇಲಾಖೆಯೊಂದಿಗೆ, ಸ್ಥಳೀಯ ಪ್ರಾಧಿಕಾರದೊಂದಿಗೆ ಮತ್ತು ಸಂಬಂಧಪಟ್ಟ ಇತರ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸತಕ್ಕದ್ದು ಮತ್ತು ಸಹಕರಿಸತಕ್ಕದ್ದು.

(4) ಭದ್ರತಾ ದಳದ ಮುಖ್ಯಸ್ಥನು, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ರ ಮೇರೆಗೆ ಕ್ರಮ ಕೈಗೊಳ್ಳುವುದಕ್ಕಾಗಿ ಅಧಿನಿಯಮದ 37ನೇ ಪ್ರಕರಣದ (2)ನೇ ಉಪ–ಪ್ರಕರಣದ (ಎ) ಖಂಡದ ಮೇರೆಗೆ ಸಕ್ಷಮ ಅಧಿಕಾರಿಯೆಂದು ಘೋಷಿಸಲಾದ ಅಧಿಕಾರಿಯಾಗಿರತಕ್ಕದ್ದು.

(5) ಪ್ರಾಧಿಕಾರ ಭದ್ರತಾ ದಳವು, ಭದ್ರತಾ ವಿಷಯಗಳ ಮೇಲೆ ಕಾಲಕಾಲಕ್ಕೆ ತೆಗೆದುಕೊಳ್ಳುವ ತೀರ್ಮಾನಗಳನ್ನು ಜಾರಿಗೆ ತರಲು ಪ್ರಾಧಿಕಾರಕ್ಕೆ ನೆರವಾಗತಕ್ಕದ್ದು.

(6) ಪ್ರಾಧಿಕಾರ ಭದ್ರತಾ ದಳವು, ಸ್ಥಳೀಯ ಯೋಜನಾ ಪ್ರದೇಶದ ಗಡಿಗಳನ್ನು ಕಾಪಾಡಿಕೊಂಡು ಬರುವಲ್ಲಿ ಪ್ರಾಧಿಕಾರಕ್ಕೆ ನೆರವಾಗತಕ್ಕದ್ದು.

(7) ಪ್ರಾಧಿಕಾರಕ್ಕೆ ನಿಯತಕಾಲಿಕ ವಿವರ ಪತ್ರಗಳು ಅಥವಾ ಪ್ರಗತಿ ವರದಿಗಳನ್ನು ಕಳುಹಿಸುವುದು ಪ್ರಾಧಿಕಾರ ಭದ್ರತಾ ದಳದ ಮುಖ್ಯಸ್ಥನ ಕರ್ತವ್ಯವಾಗಿರತಕ್ಕದ್ದು.

(8) ಅಧಿನಿಯಮದ ಮತ್ತು ಈ ನಿಯಮಗಳ ಉದ್ದೇಶಗಳನ್ನು ಸಾಧಿಸುವ ದೃಷ್ಟಿಯಿಂದ ಪ್ರಾಧಿಕಾರದ ಭದ್ರತಾ ದಳದ ಮುಖ್ಯಸ್ಥನು, ಭದ್ರತಾ ದಳವು ಸದಾ ಜಾಗೃತವಾಗಿದೆಯೇ ಮತ್ತು ಅದರ ಆರಕ್ಷಕರ ಮತ್ತು ಸಾಧನ ಸಾಮಗ್ರಿಗಳ ಸ್ಥಿತಿ ಉತ್ತಮವಾಗಿದೆಯೇ ಎಂಬುದನ್ನು ಗಮನಿಸತಕ್ಕದ್ದು.

ಅಧ್ಯಾಯ –III

ರಾಜ್ಯಮಟ್ಟದ ಸಲಹಾ ಸಮಿತಿ

6. ಸಭೆಯ ನೋಟೀಸು.–(1) ರಾಜ್ಯಮಟ್ಟದ ಸಲಹಾ ಸಮಿತಿಯ ಕಾರ್ಯಕಲಾಪ ನಿರ್ವಹಣೆಗಾಗಿ ಸಭೆಯನ್ನು, ಅಧ್ಯಕ್ಷನು ಅಥವಾ ಅಧ್ಯಕ್ಷನ ವ್ಯಕ್ತ ಅನುಮೋದನೆ ಪಡೆದು ಸದಸ್ಯ ಕಾರ್ಯದರ್ಶಿಯು ಕರೆಯತಕ್ಕದ್ದು.

(2) ಅಂಥ ಸಭೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ನಿರ್ದಿಷ್ಟಪಡಿಸುವ ಪೂರ್ಣ ಏಳು ದಿನಗಳ ಸೂಚನೆಯನ್ನು ಮತ್ತು ಅಲ್ಲಿ ನಡೆಸಬೇಕಾಗಿರುವ ಕಾರ್ಯಕಲಾಪಗಳ ಕಾರ್ಯಸೂಚಿಯನ್ನು, ಸದಸ್ಯ ಕಾರ್ಯದರ್ಶಿಯು ಸಂಬಂಧಪಟ್ಟವರಿಗೆ ನೀಡತಕ್ಕದ್ದು.

7. ಕೋರಂ.–ಕೋರಂನ ಪಾಲನೆಗಾಗಿ, ಸಭೆಯಲ್ಲಿ ಹಾಜರಿರುವ ಸದಸ್ಯರ ಸಂಖ್ಯೆಯು, ಒಟ್ಟು ಸಂಖ್ಯೆಯ ಮೂರನೇ ಒಂದಕ್ಕಿಂತ (1/3) ಕಡಿಮೆ ಇದ್ದರೆ, ಪೀಠಾಸೀನ ಅಧಿಕಾರಿಯು, 15 ನಿಮಿಷಗಳ ಕಾಲ ಕಾದುನೋಡಿ ಆ ತರುವಾಯ, ಆತನು ಯುಕ್ತವಾಗಿ ನಿಗದಿಪಡಿಸಬಹುದಾದಂಥ ಮುಂದಿನ ಸಮಯಕ್ಕೆ ಅಥವಾ ಇನ್ನಾವುದೇ ಮುಂದಿನ ದಿನಕ್ಕೆ ಸಭೆಯನ್ನು ಮುಂದೂಡತಕ್ಕದ್ದು ಮತ್ತು ಹಾಗೆ ಸಭೆಯನ್ನು ಮುಂದೂಡಿದ ಬಗ್ಗೆ ನೋಟೀಸನ್ನು ಆದಷ್ಟು ಬೇಗ ಸಂಬಂಧಪಟ್ಟ ಸದಸ್ಯರಿಗೆ ನೀಡತಕ್ಕದ್ದು ಮತ್ತು ಮೂಲ ಸಭೆಯಲ್ಲಿ ಕೋರಂ ಇದ್ದಿದ್ದರೆ, ಅದರ ಮುಂದೆ ಯಾವ ಕಾರ್ಯಕಲಾಪವನ್ನು ತರಬೇಕಾಗಿತ್ತೋ ಆ ಕಾರ್ಯಕಲಾಪವನ್ನು ಮುಂದೂಡಿದ ಸಭೆಯ ಮುಂದೆ ತರತಕ್ಕದ್ದು ಮತ್ತು ಅಂಥ ಸಭೆಯಲ್ಲಿ ಕೋರಂ ಇಲ್ಲದಿದ್ದಾಗ್ಯೂ ವಿಲೆ ಮಾಡಬಹುದು.

8. ಪೀಠಾಸೀನ ಅಧಿಕಾರಿ.–ಅಧ್ಯಕ್ಷನು ಪ್ರತಿಯೊಂದು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು. ಯಾವುದೇ ಕಾರಣಕ್ಕಾಗಿ ಅಧ್ಯಕ್ಷನು ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸಹ–ಅಧ್ಯಕ್ಷನು ರಾಜ್ಯಮಟ್ಟದ ಸಲಹಾ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

9. ಭಾಗವಹಿಸುವುದು.–ಸಲಹಾ ಸಮಿತಿಯ ಯಾರೇ ಸದಸ್ಯನು, ತಾನೇ ಸ್ವತಃ ಅಥವಾ ಆತನ ಪಾಲುದಾರನು ಅಥವಾ ಸಂಬಂಧಿಕರು ನೇರವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿರುವ ವಿಷಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸತಕ್ಕದ್ದಲ್ಲ ಅಥವಾ ಮತ ನೀಡತಕ್ಕದ್ದಲ್ಲ.

10. ವ್ಯವಹರಣೆಗಳ ದಾಖಲೆ.–(1) ರಾಜ್ಯಮಟ್ಟದ ಸಲಹಾ ಸಮಿತಿಯ ಸಭೆಯ ವ್ಯವಹರಣೆಗಳನ್ನು ದಾಖಲು ಮಾಡತಕ್ಕದ್ದು ಮತ್ತು ಅಧ್ಯಕ್ಷನ ಅನುಮೋದನೆ ಪಡೆದ ತರುವಾಯ, ಹದಿನೈದು ದಿನಗಳ ಅವಧಿಯೊಳಗೆ ಸದಸ್ಯ–ಕಾರ್ಯದರ್ಶಿಯು ಅದನ್ನು ಸಂಬಂಧಪಟ್ಟ ಸದಸ್ಯರಿಗೆ ಕಳುಹಿಸುವ ವ್ಯವಸ್ಥೆ ಮಾಡತಕ್ಕದ್ದು.

(2) ಯಾರೇ ಸದಸ್ಯನು, ವ್ಯವಹರಣೆಗಳ ದಾಖಲೆಯ ಬಗ್ಗೆ ಅಥವಾ ಅದರ ಯಾವುದೇ ಭಾಗದ ಬಗ್ಗೆ ಸಹಮತ ಹೊಂದಿರದಿದ್ದರೆ, ಆತನು, ಅದನ್ನು ಅಧ್ಯಕ್ಷರ ಗಮನಕ್ಕೆ ತರುವುದಕ್ಕಾಗಿ ಸದಸ್ಯ–ಕಾರ್ಯದರ್ಶಿಗೆ ಏಳು ದಿನಗಳ ಒಳಗಾಗಿ ಅದನ್ನು ತಿಳಿಸತಕ್ಕದ್ದು ಮತ್ತು ಅದರ ಮೇಲಿನ ಅಧ್ಯಕ್ಷರ ತೀರ್ಮಾನವು ಅಂತಿಮವಾದುದಾಗಿರತಕ್ಕದ್ದು.

11. ವಿಶೇಷ ಸಭೆ.–ಅಧ್ಯಕ್ಷರು, ರಾಜ್ಯಮಟ್ಟದ ಸಲಹಾ ಸಮಿತಿಯ ವಿಶೇಷ ಅಥವಾ ತುರ್ತು ಸಭೆಯನ್ನು ಕರೆಯುವುದು ಅವಶ್ಯಕವೆಂದು ಭಾವಿಸಿದರೆ, ಅವರು ಮೂರು ದಿನಗಳ ನೋಟೀಸನ್ನು ನೀಡುವ ಮೂಲಕ ಹಾಗೆ ಅಂಥ ಸಭೆಯನ್ನು ಕರೆಯಬಹುದು. ವಿಶೇಷ ಅಥವಾ ತುರ್ತು ಸಭೆಯನ್ನು ಕರೆದಾಗ 6 ರಿಂದ 10ರವರೆಗಿನ ನಿಯಮಗಳ ಉಪಬಂಧಗಳನ್ನು ಅನುಸರಿಸತಕ್ಕದ್ದು.

12. ಸರ್ಕಾರಕ್ಕೆ ಮಾಹಿತಿ.–ಸದಸ್ಯ–ಕಾರ್ಯದರ್ಶಿಯು ವ್ಯವಹರಣೆಗಳ ದಾಖಲೆಗಳನ್ನು ಮತ್ತು ಆ ಸಂಬಂಧದಲ್ಲಿನ ತೀರ್ಮಾನಗಳನ್ನು ಆದಷ್ಟು ಬೇಗ ಸರ್ಕಾರದ ಮುಂದೆ ಮಂಡಿಸತಕ್ಕದ್ದು.

13. ಪ್ರಯಾಣ ಭತ್ಯೆ ಮತ್ತು ದಿನಭತ್ಯೆ.–ಅನುಕ್ರಮವಾಗಿ 6ನೇ ಪ್ರಕರಣದ (2) ಮತ್ತು (3)ನೇ ಉಪ ಪ್ರಕರಣಗಳ ಮೇರೆಗಿನ ಸಭೆಗಾಗಿ ಆಹ್ವಾನಿಸಲಾದ ಸಹಯೋಜಿತ ಸದಸ್ಯರು ಮತ್ತು ತಜ್ಞರು ಕರ್ನಾಟಕ ಸಿವಿಲ್ ಸೇವಾ ನಿಯಮಗಳ ಅನುಬಂಧ–ಎ ಪ್ರಕಾರ ಚಾಲ್ತಿ ದರಗಳಲ್ಲಿ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ ಪಡೆಯಲು ಅರ್ಹರಾಗಿರತಕ್ಕದ್ದು.

ಅಧ್ಯಾಯ –IV

ಆಯುಕ್ತರ ಇತರ ಪ್ರಕಾರ್ಯಗಳು

14. ಆಯುಕ್ತರ ಇತರ ಪ್ರಕಾರ್ಯಗಳು.–ಅಧಿನಿಯಮದ 8ನೇ ಪ್ರಕರಣದ (2)ನೇ ಉಪ ಪ್ರಕರಣದ ಮೇರೆಗೆ ಗೊತ್ತುಪಡಿಸಿದ ಪ್ರಕಾರ್ಯಗಳ ಜೊತೆಗೆ ಈ ಮುಂದಿನ ಪ್ರಕಾರ್ಯಗಳನ್ನು ನೆರವೇರಿಸುವುದು ಆಯುಕ್ತರ ಕರ್ತವ್ಯವಾಗಿರತಕ್ಕದ್ದು, ಎಂದರೆ:–

(i) ಪ್ರಾಧಿಕಾರದ ಸಭೆಗಳನ್ನು ಕರೆಯುವುದು ಮತ್ತು ಅವುಗಳನ್ನು ನಡೆಸುವುದು ಮತ್ತು ಸಭೆಗಳ ನಡವಳಿಗಳನ್ನು ಸಿದ್ಧಪಡಿಸುವುದು ಮತ್ತು ಪ್ರಾಧಿಕಾರದ ನಿರ್ಣಯಗಳನ್ನು ಕಾರ್ಯಗತಗೊಳಿಸುವುದು:

ಪರಂತು, ಪ್ರಾಧಿಕಾರದ ಯಾವುದೇ ನಿರ್ಣಯವು ಅಧಿನಿಯಮದ ಅಥವಾ ಯಾವುದೇ ಇತರ ಕಾನೂನಿನ ಯಾವುದೇ ಉಪಬಂಧವನ್ನು ಅಥವಾ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನ ಮೇರೆಗೆ ರಚಿಸಿದ ಅಥವಾ ಹೊರಡಿಸಿದ ಯಾವುದೇ ನಿಯಮ, ಅಧಿಸೂಚನೆ, ವಿನಿಯಮನ ಅಥವಾ ಉಪ–ವಿಧಿಯನ್ನು ಅಥವಾ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಾಗೂ ಪರಂಪರೆಯ ಹಿತಾಸಕ್ತಿಗೆ ಪ್ರತಿಕೂಲವಾಗಿದೆಯೆಂದು ಅಥವಾ ಬಾಧಕ ಉಂಟು ಮಾಡುತ್ತಿದೆಯೆಂದು ಆಯುಕ್ತರು ಅಭಿಪ್ರಾಯಪಟ್ಟರೆ, ಅವರು ನಿರ್ಣಯವನ್ನು ಅಂಗೀಕರಿಸಿದ ಹದಿನೈದು ದಿನಗಳ ಒಳಗಾಗಿ, ವಿಷಯವನ್ನು ಆದೇಶಗಳಿಗಾಗಿ ಸರ್ಕಾರಕ್ಕೆ ಉಲ್ಲೇಖಿಸತಕ್ಕದ್ದು ಮತ್ತು ತಾನು ತೆಗೆದುಕೊಂಡ ಕ್ರಮದ ಬಗ್ಗೆ ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಿಳಿಸತಕ್ಕದ್ದು ಮತ್ತು ಅಂಥ ಉಲ್ಲೇಖದ ಮೇಲೆ ಸರ್ಕಾರದ ಆದೇಶಗಳನ್ನು ಸ್ವೀಕರಿಸುವವರೆಗೆ, ಆಯುಕ್ತರು ನಿರ್ಣಯವನ್ನು ಕಾರ್ಯಗತಗೊಳಿಸಲು ಬದ್ಧರಾಗಿರತಕ್ಕದ್ದಲ್ಲ;

(ii) ಪ್ರಾಧಿಕಾರದ ಸಭೆಗಳ ನಡವಳಿಕೆಗಳ ಅಥವಾ ವ್ಯವಹರಣೆಗಳ ಒಂದು ಪ್ರತಿಯನ್ನು ಮತ್ತು ಸರ್ಕಾರವು ಕಾಲಕಾಲಕ್ಕೆ ಕೇಳಬಹುದಾದ ಯಾವುದೇ ವಿವರಪಟ್ಟಿಕೆಯನ್ನು ಅಥವಾ ಇತರ ಮಾಹಿತಿಯನ್ನು ಸರ್ಕಾರಕ್ಕೆ ಒದಗಿಸುವುದು;

(iii) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳು ಮತ್ತು ಕಾಮಗಾರಿಗಳನ್ನು ಕಾರ್ಯರೂಪಕ್ಕೆ ತರುವುದು ಮತ್ತು ಅನುಷ್ಠಾನಗೊಳಿಸುವುದು ಮತ್ತು ಅದರ ಅವಶ್ಯಕ ವೆಚ್ಚಗಳನ್ನು ಭರಿಸುವುದು;

(iv) ಕಾರ್ಯನಿರ್ವಾಹಕ ಆಡಳಿತದ ವಿಷಯಗಳಲ್ಲಿ ಪ್ರಾಧಿಕಾರ ಭದ್ರತಾ ದಳವನ್ನು ಹೊರತುಪಡಿಸಿ, ಪ್ರಾಧಿಕಾರದ ಎಲ್ಲ ಅಧಿಕಾರಿಗಳು ಮತ್ತು ಉದ್ಯೋಗಿಗಳ ಮೇಲೆ ಮೇಲ್ವಿಚಾರಣೆ ನಡೆಸುವುದು ಮತ್ತು ನಿಯಂತ್ರಣ ಸಾಧಿಸುವುದು ಮತ್ತು ಅಂಥ ಅಧಿಕಾರಿಗಳ ಮತ್ತು ನೌಕರರ ಸೇವೆಗಳು ಮತ್ತು ಅವರ ವೇತನ, ವಿಶೇಷಾಧಿಕಾರಗಳು ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಎಲ್ಲ ಪ್ರಶ್ನೆಗಳನ್ನು ಪರಿಹರಿಸುವುದು;

(v) ಪ್ರಾಧಿಕಾರದ ಪತ್ರವ್ಯವಹಾರಗಳನ್ನು ನಡೆಸುವುದು ಮತ್ತು ನಿರ್ವಹಿಸುವುದು;

(vi) ಪ್ರಾಧಿಕಾರದ ಎಲ್ಲ ಅನುಮತಿಗಳು, ಆದೇಶಗಳು, ತೀರ್ಮಾನಗಳು, ನೋಟೀಸುಗಳು ಮತ್ತು ಇತರ ದಸ್ತಾವೇಜುಗಳಿಗೆ ಮತ್ತು ಪ್ರಾಧಿಕಾರದ ಆದೇಶಗಳಿಗೆ ತನ್ನ ಸಹಿ ಹಾಕುವ ಮೂಲಕ ಅಧಿಪ್ರಮಾಣೀಕರಿಸುವುದು;

(vii) ಪ್ರಾಧಿಕಾರದ ಲೆಕ್ಕಪತ್ರಗಳು ಮತ್ತು ದಾಖಲೆಗಳ ಮೇಲ್ವಿಚಾರಣೆ ಮಾಡುವುದು ಮತ್ತು ಅವುಗಳ ಮೇಲೆ ನಿಯಂತ್ರಣ ಹೊಂದಿರುವುದು.

ಅಧ್ಯಾಯ –V

ಯೋಜನಾ ಅಧಿಕಾರಿಯ ಕರ್ತವ್ಯಗಳು

15. ಯೋಜನಾ ಅಧಿಕಾರಿಯ ಕರ್ತವ್ಯಗಳು.– 9ನೇ ಪ್ರಕರಣದ (2)ನೇ ಉಪ ಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ಅಧಿನಿಯಮದ ಮತ್ತು ನಿಯಮಗಳ ಉಪಬಂಧಗಳಿಗನುಸಾರವಾಗಿ ಯೋಜನಾ ಅಧಿಕಾರಿಯ ಕರ್ತವ್ಯಗಳು ಈ ಮುಂದಿನಂತಿರತಕ್ಕದ್ದು,–

(i) ಪರಂಪರೆ ಪ್ರದೇಶದ ಅಭಿವೃದ್ಧಿ ಯೋಜನೆಯನ್ನು ಮತ್ತು ಸ್ಥಳ ನಿರ್ವಹಣಾ ಯೋಜನೆಯನ್ನು ಸಿದ್ಧಪಡಿಸುವ ಕಾರ್ಯದಲ್ಲಿ ಪ್ರಾಧಿಕಾರಕ್ಕೆ ನೆರವಾಗುವುದು;

(ii) ಪರಂಪರೆ ಪ್ರದೇಶ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅವಶ್ಯವಾಗಬಹುದಾದ ಕಾರ್ಯಯೋಜನೆಗಳನ್ನು ರೂಪಿಸಲು ಪ್ರಾಧಿಕಾರಕ್ಕೆ ನೆರವಾಗುವುದು;

(iii) ಪ್ರಾಧಿಕಾರವು ಮತ್ತು ಸರ್ಕಾರವು ಅನುಮೋದಿಸಿದ ಸದರಿ ಯೋಜನೆಗೆ ಮತ್ತು ಕಾರ್ಯಯೋಜನೆಗಳಿಗೆ ಅನುಸಾರವಾಗಿ ಅಭಿವೃದ್ಧಿ ಯೋಜನೆಯನ್ನು, ,ಇತರ ಯೋಜನಾ ಕಾರ್ಯಯೋಜನೆಗಳನ್ನು ಮತ್ತು ಪರಂಪರೆ ಪ್ರದೇಶದ ಅಭಿವೃದ್ಧಿಯನ್ನು ಕಾರ್ಯಗತಗೊಳಿಸುವುದನ್ನು ಸುನಿಶ್ಚಿತಪಡಿಸಿಕೊಳ್ಳುವಲ್ಲಿ ಮತ್ತು ಸಮನ್ವಯಗೊಳಿಸುವಲ್ಲಿ ಪ್ರಾಧಿಕಾರಕ್ಕೆ ನೆರವಾಗುವುದು;

(iv) ಯೋಜನೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದಂತೆ ಪ್ರಾಧಿಕಾರವು ವಹಿಸಿಕೊಡಬಹುದಾದಂಥ ಇತರ ಕೆಲಸಗಳನ್ನು ಮತ್ತು ಕಾರ್ಯಗಳನ್ನು ಮಾಡುವುದು.

ಅಧ್ಯಾಯ –VI

ಲೆಕ್ಕಪತ್ರಾಧಿಕಾರಿಯ ಕರ್ತವ್ಯಗಳು

16. ಲೆಕ್ಕಪತ್ರಾಧಿಕಾರಿಯ ಕರ್ತವ್ಯಗಳು.– ಈ ಮುಂದಿನವು ಪ್ರಾಧಿಕಾರದ ಲೆಕ್ಕಪತ್ರಾಧಿಕಾರಿಯ ಕರ್ತವ್ಯವಾಗಿರತಕ್ಕದ್ದು,–

(i) ಪ್ರಾಧಿಕಾರದ ಲೆಕ್ಕಪತ್ರಗಳನ್ನು ನಿರ್ವಹಿಸುವುದು;

(ii) ಆಯುಕ್ತರಿಗೆ ಸಲ್ಲಿಸುವುದಕ್ಕಾಗಿ ಲೆಕ್ಕಪತ್ರಗಳ ವಾರ್ಷಿಕ ವಿವರ ಪತ್ರವನ್ನು ಮತ್ತು ಜಮಾ–ಖರ್ಚು ಪಟ್ಟಿಯನ್ನು ಸಿದ್ಧಪಡಿಸುವುದು;

(iii) ಪ್ರಾಧಿಕಾರದ ಲೆಕ್ಕಪತ್ರಗಳನ್ನು ನಿರ್ವಹಿಸುವುದಕ್ಕೆ ಮತ್ತು ಆಯವ್ಯಯ ಪತ್ರವನ್ನು ಸಿದ್ಧಪಡಿಸುವುದಕ್ಕೆ ಸಂಬಂಧಿಸಿದಂತೆ ಆಯುಕ್ತರು ವಹಿಸಿಕೊಡಬಹುದಾದಂಥ ಹಣಕಾಸಿಗೆ ಸಂಬಂಧಪಟ್ಟ ಇತರ ಕರ್ತವ್ಯಗಳನ್ನು ನೆರವೇರಿಸುವುದು.

ಅಧ್ಯಾಯ –VII

ಪ್ರಾಧಿಕಾರದ ಇತರ ಪ್ರಕಾರ್ಯಗಳು

17. ಪ್ರಾಧಿಕಾರದ ಇತರ ಪ್ರಕಾರ್ಯಗಳು.– ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಪ್ರಾಧಿಕಾರವು ಈ ಮುಂದಿನ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು, ಎಂದರೆ:–

(1) ಪ್ರಾಧಿಕಾರವು, ಎಲ್ಲ ಪುರಾತತ್ವ ಸ್ಥಳಗಳು ಮತ್ತು ಸ್ಮಾರಕಗಳು, ಪ್ರಾಚೀನ ವಸ್ತುಗಳು ಮತ್ತು ಕುಶಲ ನಿರ್ಮಿತಿಗಳು, ಬಂಡೆಗಳು ಮತ್ತು ಜಲ ನಿಕಾಯಗಳು, ವನ್ಯಜೀವಿ, ಸಸ್ಯಸಂಕುಲ ಮತ್ತು ಪರಂಪರೆ ಪ್ರದೇಶದೊಳಗಿನ ಇತರ ಪರಿಸರದ ಸಮಗ್ರ ನಿರ್ವಹಣೆಗಾಗಿ ಉಪಬಂಧಕಲ್ಪಿಸುವ ಎಲ್ಲ ಸಂಗತಿಗಳನ್ನು ಪರಿಗಣನೆಗೆ ತೆಗೆದುಕೊಂಡ ನಂತರ ಸ್ಥಳ ನಿರ್ವಹಣಾ ಯೋಜನೆಯನ್ನು ಅಥವಾ ಪರಂಪರೆ ಪ್ರದೇಶದ ಸಂರಕ್ಷಣೆಯ ಮಹಾ ಯೋಜನೆಯನ್ನು ಸಿದ್ಧಪಡಿಸತಕ್ಕದ್ದು; ಮತ್ತು ಹಾಗೆ ಸಿದ್ಧಪಡಿಸಿದ ಯೋಜನೆಯನ್ನು ಕಾರ್ಯಗತಗೊಳಿಸುವುದಕ್ಕಾಗಿ ಹಾಗೂ ಕಾಲದಿಂದ ಕಾಲಕ್ಕೆ ಅದರ ಪ್ರಗತಿಯನ್ನು ಮೇಲ್ವಿಚಾರಣೆ ಮಾಡುವುದಕ್ಕಾಗಿ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು ಹಾಗೂ ಅದರ ರೀತಿ ಮತ್ತು ಪ್ರಕ್ರಿಯಗಳ ಸ್ಥೂಲ ರೂಪರೇಷೆಗಳನ್ನು ಸಿದ್ಧಪಡಿಸತಕ್ಕದ್ದು;

(2) ಪ್ರಾಧಿಕಾರವು ಆ ಇಡೀ ಭೂವಿಸ್ತಾರವನ್ನು ಆ ಸ್ಥಳದ ಎಲ್ಲಾ ನೈಸರ್ಗಿಕ, ಪುರಾತತ್ವ ಮತ್ತು ಸಾಂಸ್ಕೃತಿಕ ಸಂಪನ್ಮೂಲಗಳು ಹಾಗೂ ಇನ್ನಿತರ ಪರಿಸರಗಳೊಂದಿಗೆ ಅದರ ನಿಸರ್ಗದತ್ತ ಸೌಂದರ್ಯವನ್ನು ಪುರಾತತ್ವ ಗಣನಾಂಶಗಳ ವ್ಯಾಪ್ತಿಯೊಳಗೆ ಹೆಚ್ಚಿಸುವ ಹಾಗೂ ಕಾಪಾಡಿಕೊಂಡು ಬರುವ ಉದ್ದೇಶದಿಂದ ಸಂರಕ್ಷಿಸುವುದಕ್ಕಾಗಿ ಕ್ರಮಗಳನ್ನು ಕೈಗೊಳ್ಳತಕ್ಕದ್ದು;

(3) ಪ್ರಾಧಿಕಾರವು ಪರಂಪರಾ ಪ್ರದೇಶವನ್ನು ನೋಡಲು ಬರುವವರು ಹಾಗೂ ಪ್ರವಾಸಿಗರಿಗೆ ಅಗತ್ಯವಾದ ಮೂಲಭೂತ ಅವಶ್ಯಕತೆಗಳನ್ನು ಒದಗಿಸಿ ಸಾಕಷ್ಟು ಸೌಕರ್ಯಗಳನ್ನು ಕಲ್ಪಿಸುವ ಮೂಲಕ ಪ್ರವಾಸೋದ್ಯಮವನ್ನು ಪೋಷಿಸುವ ದೃಷ್ಟಿಯಿಂದ ಹಾಗೆಯೇ ಪುರಾತತ್ವ ಗಣನಾಂಶಗಳ ಬಗ್ಗೆ ಗಮನ ನೀಡಿ ಆ ಪರಂಪರೆಯ ಪ್ರದೇಶದಲ್ಲಿರುವ ಸ್ಥಳೀಯರಿಗೆ ಅವರ ಮೂಲಭೂತ ನಾಗರಿಕ ಸೌಕರ್ಯಗಳನ್ನು ಒದಗಿಸಿ ಅವರ ಸಮಂಜಸ ಅಗತ್ಯತೆಗಳನ್ನು ಪೂರೈಸುವ ಮೂಲಕ ಅವರ ಕ್ಷೇಮಾಭಿವೃದ್ಧಿ ಮಾಡುವ ದೃಷ್ಟಿಯಿಂದ ಆ ಪರಂಪರಾ ಪ್ರದೇಶದ ಭೂವಿಸ್ತಾರದ ಅಭಿವೃದ್ಧಿಯನ್ನು ಮಾಡಿಸತಕ್ಕದ್ದು;

(4) ಭಾರತ ಪುರಾತತ್ವ ಸರ್ವೇಕ್ಷಣಾ ಇಲಾಖೆ ಹಾಗೂ ಪುರಾತತ್ವ ಮತ್ತು ವಸ್ತು ಸಂಗ್ರಹಾಲಯಗಳ ಇಲಾಖೆಯು ತಮ್ಮ ತಮ್ಮ ಅಧಿಕಾರ ವ್ಯಾಪ್ತಿಯ ಪ್ರದೇಶದಲ್ಲಿ ನಡೆಸುವ ಚುಟುವಟಿಕೆಗಳಿಗೆ ಹಾಗೂ ಪುರಾತತ್ವ ಸ್ಥಳದ ನಿರ್ವಹಣೆ ಮತ್ತು ಕಾಪಾಡಿಕೊಂಡು ಬರುವ ಕೆಲಸಗಳಿಗೆ ಪ್ರಾಧಿಕಾರವು ಸಮನ್ವಯ ಸಹಕಾರವನ್ನು ನೀಡತಕ್ಕದ್ದು.

ಅಧ್ಯಾಯ –VIII

ವಾರ್ಷಿಕ ಆಯವ್ಯಯ

18. ಪ್ರಾಧಿಕಾರದ ಆಯುಕ್ತರು ವಾರ್ಷಿಕ ಆಯವ್ಯಯವನ್ನು ಸಿದ್ಧಪಡಿಸುವುದು.–ಪ್ರಾಧಿಕಾರದ ಆಯುಕ್ತರು ಪ್ರತಿವರ್ಷದ ಡಿಸೆಂಬರ್ ತಿಂಗಳಿನಲ್ಲಿ, ಸರ್ಕಾರವು ಅಗತ್ಯಪಡಿಸುವಂಥ ನಮೂನೆಯಲ್ಲಿ ಇತರ ವಿವರಗಳೊಂದಿಗೆ ಮುಂದಿನ ಮಾರ್ಚ್ ತಿಂಗಳಿನ 31ನೇ ದಿನಾಂಕದಂದು ಕೊನೆಗೊಳ್ಳುವ ಹಣಕಾಸು ವರ್ಷಕ್ಕಾಗಿ ವಾಸ್ತವಿಕ ಮತ್ತು ನಿರೀಕ್ಷಿತ ಸ್ವೀಕೃತಿಗಳ ಮತ್ತು ವೆಚ್ಚಗಳ ಪೂರ್ಣ ಲೆಕ್ಕದೊಂದಿಗೆ ಮುಂದಿನ ಏಪ್ರಿಲ್ ಮೊದಲ ದಿನದಂದು ಪ್ರಾರಂಭವಾಗುವ ಮುಂಬರುವ ಹಣಕಾಸು ವರ್ಷಕ್ಕಾಗಿ ಪ್ರಾಧಿಕಾರದ ಆದಾಯ ಮತ್ತು ವೆಚ್ಚವನ್ನು ತೋರಿಸುವ ಸವಿವರ ಅಂದಾಜುಗಳನ್ನು ಒಳಗೊಂಡ ಒಂದು ಆಯವ್ಯಯ ಪತ್ರವನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

19. ವಾರ್ಷಿಕ ಆಯವ್ಯಯ ವ್ಯವಹರಣೆಗಳು.– (1) ಪ್ರಾಧಿಕಾರವು, ಮುಂದಿನ ವರ್ಷಕ್ಕಾಗಿ ಏಪ್ರಿಲ್ ಮೊದಲ ದಿನದಂದು ಪ್ರಾರಂಭವಾಗುವ ವರ್ಷದ ಆಯವ್ಯಯದಲ್ಲಿ ಒಳಗೊಂಡಿರುವ ವಿನಿಯೋಜನೆಗಳ ಮತ್ತು ಅರ್ಥೋಪಾಯಗಳ ಮೇಲೆ ತೀರ್ಮಾನ ಕೈಗೊಳ್ಳತಕ್ಕದ್ದು. ಪ್ರಾಧಿಕಾರವು ಅನುಮೋದಿಸಿದ ಆಯವ್ಯಯ ಪತ್ರದ ಮೂರು ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು.

(2) ಅಂಥ ಆಯವ್ಯಯ ಅಂದಾಜಿನಲ್ಲಿ, ಪ್ರಾಧಿಕಾರವು, ಇತರ ವಿಷಯಗಳ ಜೊತೆಗೆ,–

(ಎ) ಅಧಿನಿಯಮದ ಮತ್ತು ಈ ನಿಯಮಗಳ ಮೂಲಕ ಪ್ರಾಧಿಕಾರಕ್ಕೆ ವಹಿಸಿದ ಹಲವು ಕರ್ತವ್ಯಗಳನ್ನು ನೆರವೇರಿಸಲು ಅಗತ್ಯವಾಗಬಹುದಾದಂಥ ಸೇವೆಗಾಗಿ ಸಾಕಷ್ಟು ಮತ್ತು ಸೂಕ್ತ ಉಪಬಂಧಗಳನ್ನು ಕಲ್ಪಿಸತಕ್ಕದ್ದು;

(ಬಿ) ಪ್ರಾಧಿಕಾರವು ಒಪ್ಪಂದ ಮಾಡಿಕೊಂಡು ತಾನು ತೆಗೆದುಕೊಂಡ ಸಾಲಗಳ ಸಂಬಂಧದಲ್ಲಿ ಯಾವ ಅಸಲು ಮತ್ತು ಬಡ್ಡಿಯನ್ನು ಸಂದಾಯ ಮಾಡಲು ಹೊಣೆಯಾಗಿರುವುದೋ ಆ ಎಲ್ಲ ಕಂತುಗಳನ್ನು ಗಡುವಿನ ದಿನಾಂಕದಂದು ಸಂದಾಯ ಮಾಡಲು ಉಪಬಂಧ ಕಲ್ಪಿಸತಕ್ಕದ್ದು;

(ಸಿ) ಸರ್ಕಾರಕ್ಕೆ ಮತ್ತು ಇತರೆ ಸರ್ಕಾರಿ ಏಜೆನ್ಸಿಗಳಿಗೆ ಸಂದಾಯ ಮಾಡಬೇಕಾದ ಎಲ್ಲ ಮೊತ್ತಗಳನ್ನು ಸಂದಾಯಮಾಡಲು ಉಪಬಂಧ ಕಲ್ಪಿಸತಕ್ಕದ್ದು;

(ಡಿ) ಮೂರು ತಿಂಗಳುಗಳ ಅವಧಿಯ ಸಿಬ್ಬಂದಿ ವೆಚ್ಚವನ್ನು ಭರಿಸಲು ಬೇಕಾಗಬಹುದಾದ ಮೊತ್ತಕ್ಕಿಂತ ಕಡಿಮೆ ಇಲ್ಲದಷ್ಟು ಮೊತ್ತವನ್ನು ಸದರಿ ವರ್ಷದ ಕೊನೆಯಲ್ಲಿ ಬಾಕಿ ಉಳಿಸಿಕೊಳ್ಳಲು ಅವಕಾಶ ನೀಡತಕ್ಕದ್ದು.

ಅಧ್ಯಾಯ –IX

ವಾರ್ಷಿಕ ವರದಿ

20. ಪ್ರಾಧಿಕಾರದ ವಾರ್ಷಿಕ ವರದಿ.– (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷದ ತನ್ನ ವಾರ್ಷಿಕ ವರದಿಯನ್ನು, ತರುವಾಯದ ವರ್ಷದ ಜೂನ್ 30ನೇ ದಿನಾಂಕಕ್ಕೆ ಮುಂಚೆ, ನಮೂನೆ–1ರಲ್ಲಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ವರದಿಯು, ಹಣಕಾಸು ವರ್ಷದ ಅವಧಿಯಲ್ಲಿನ ಪ್ರಾಧಿಕಾರದ ಕಾರ್ಯಚಟುವಟಿಕೆಗಳನ್ನು, ಹಣಕಾಸು ಪರಿಸ್ಥಿತಿಯನ್ನು, ಅಧಿಕಾರಿಗಳ ಮತ್ತು ಸಿಬ್ಬಂದಿ ವರ್ಗದ ವಿವರಗಳನ್ನು, ರಾಜ್ಯ ಸರ್ಕಾರವು ಉಲ್ಲೇಖಿಸಿದ ವಿಷಯಗಳ ಮೇಲೆ ತೆಗೆದುಕೊಂಡ ಕ್ರಮವನ್ನು ಒಳಗೊಂಡಿರತಕ್ಕದ್ದು.

(3) ವರದಿಯು, ರಾಜ್ಯಮಟ್ಟದ ಸಲಹಾ ಸಮಿತಿಯ ವ್ಯವಹರಣೆಗಳ ಸಾರಾಂಶವನ್ನು ಸಹ ಒಳಗೊಂಡಿರತಕ್ಕದ್ದು.

ಅಧ್ಯಾಯ –X

ಸಾಲಗಳು

21. ಸಾಲ ಪಡೆಯಲು ಪ್ರಾಧಿಕಾರದ ಅಧಿಕಾರ.– (1) ಪ್ರಾಧಿಕಾರವು ತನ್ನ ಸಭೆಯಲ್ಲಿ ಅಂಗೀಕರಿಸಿದ ನಿರ್ಣಯಗಳಿಗೆ ಅನುಸಾರವಾಗಿ,–

(ಎ) ನಿರ್ಮಾಣ ಕಾಮಗಾರಿಗಳಿಗಾಗಿ,

(ಬಿ) ಭೂಮಿಗಳು ಮತ್ತು ಕಟ್ಟಡಗಳನ್ನು ಅರ್ಜಿಸುವುದಕ್ಕಾಗಿ, ಅಥವಾ

(ಸಿ) ಸರ್ಕಾರಕ್ಕೆ ಕೊಡಬೇಕಾದ ಯಾವುದೇ ಸಾಲವನ್ನು ಸಂದಾಯ ಮಾಡಲು, ಅಥವಾ

(ಡಿ) ಅಧಿನಿಯಮದ ಅಥವಾ ಈ ಹಿಂದೆ ಜಾರಿಯಲ್ಲಿದ್ದ ಯಾವುದೇ ಇತರ ಕಾನೂನಿನ ಅಡಿಯಲ್ಲಿ ಎತ್ತಿದ ಸಾಲವನ್ನು ಮರುಪಾವತಿ ಮಾಡಲು:

ಎಲ್ಲ ಅಥವಾ ಈ ಅಧಿನಿಯಮದ ಮೂಲಕ ಅಥವಾ ಮೇರೆಗೆ ಅಧಿಕೃತಗೊಳಿಸಲಾದ ಯಾವುದೇ ಶುಲ್ಕಗಳ ಮತ್ತು ಬಾಕಿಗಳ ಭದ್ರತೆಗಳ ಮೇಲೆ ಸಾಲ, ಡಿಬೆಂಚರು ಅಥವಾ ಇತರ ರೂಪದಲ್ಲಿ ಅವಶ್ಯವಾಗಬಹುದಾದಷ್ಟು ಮೊತ್ತದ ಸಾಲವನ್ನು ಪಡೆಯಬಹುದು:

ಪರಂತು,–

(i) ಸರ್ಕಾರದ ಪೂರ್ವಮಂಜೂರಾತಿ ಇಲ್ಲದೆ ಯಾವುದೇ ಸಾಲವನ್ನು ಪಡೆಯತಕ್ಕದಲ್ಲ, ಮತ್ತು

(ii) ಸಾಲದ ಮೊತ್ತ, ಬಡ್ಡಿದರ ಮತ್ತು ಸಾಲಗಳನ್ನು ಪಡೆದ ದಿನಾಂಕ, ಮರುಪಾವತಿಯ ಕಾಲ ಮತ್ತು ವಿಧಾನ ಮತ್ತು ಇತರ ವಿಷಯಗಳೂ ಸೇರಿದಂತೆ ನಿಬಂಧನೆಗಳು ಸರ್ಕಾರದ ಅನುಮೋದನೆಗೆ ಒಳಪಟ್ಟಿರತಕ್ಕದ್ದು.

(2) (1)ನೇ ಉಪನಿಯಮದ ಅಡಿಯಲ್ಲಿ ಯಾವುದೇ ಹಣದ ಮೊತ್ತವನ್ನು ಸಾಲ ಪಡೆದಾಗ,–

(ಎ) ಸರ್ಕಾರದ ಪೂರ್ವ ಮಂಜೂರಾತಿ ಪಡೆಯದೆ, ಸಾಲದ ಮೊತ್ತದ ಯಾವುದೇ ಭಾಗವನ್ನು, ಸಾಲವನ್ನು ಯಾವ ಉದ್ದೇಶಕ್ಕಾಗಿ ಪಡೆಯಲಾಗಿದೆಯೋ ಆ ಉದ್ದೇಶಕ್ಕಲ್ಲದೆ ಇತರ ಯಾವುದೇ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.

(ಬಿ) (1)ನೇ ಉಪ ನಿಯಮದ (ಎ) ಖಂಡದ ಅಡಿಯಲ್ಲಿ ಪಡೆಯಲಾದ ಸಾಲದ ಮೊತ್ತದ ಯಾವುದೇ ಭಾಗವನ್ನು ಯಾವ ಕಾಮಗಾರಿಗಳ ನಿರ್ಮಾಣಕ್ಕಾಗಿ ಅಂಥ ಹಣವನ್ನು ಸಾಲಪಡೆಯಲಾಗಿದೆಯೋ ಆ ಕಾಮಗಾರಿಗಳ ನಿರ್ಮಾಣಕ್ಕಾಗಿ ವಿಶೇಷವಾಗಿ ನಿಯೋಜಿಸಿಕೊಂಡಿರುವವರನ್ನು ಹೊರತುಪಡಿಸಿ ಪ್ರಾಧಿಕಾರದ ಇತರ ಅಧಿಕಾರಿಗಳು ಅಥವಾ ನೌಕರರಿಗೆ ಸಂಬಳ ಅಥವಾ ಭತ್ಯೆಗಳನ್ನು ಸಂದಾಯಮಾಡಲು ವಿನಿಯೋಗಿಸತಕ್ಕದ್ದಲ್ಲ;

(ಸಿ) ಲೆಕ್ಕಪತ್ರಗಳಲ್ಲಿನ ಪ್ರತಿಯೊಂದು ತಿದ್ದುಪಾಟು ಅಥವಾ ಬದಲಾವಣೆಯನ್ನು ಕೆಂಪುಶಾಯಿನಲ್ಲಿ (ಮೂಲ ನಮೂದನೆಯಲ್ಲಿ ಒಂದು ಗೆರೆಯನ್ನು ಎಳೆಯುವ ಮೂಲಕ) ಸ್ಪಷ್ಟವಾಗಿ ಮಾಡಬೇಕು ಮತ್ತು ಅದನ್ನು ಸರಿಪಡಿಸಬೇಕು ಮತ್ತು ಅದಕ್ಕೆ ಲೆಕ್ಕಪತ್ರಾಧಿಕಾರಿಯವರು ಚಿಕ್ಕರುಜು ಹಾಕಿ ದೃಢೀಕರಿಸಿರಬೇಕು. ಪುಸ್ತಕಗಳು ಮತ್ತು ವೋಚರುಗಳಲ್ಲಿ ಮಾಡಿದ ಎಲ್ಲ ತಿದ್ದುಪಾಟುಗಳು ಮತ್ತು ಮಾರ್ಪಾಟುಗಳನ್ನು ಅದೇ ರೀತಿಯಲ್ಲಿ ದೃಢೀಕರಿಸಬೇಕು. ಎರೇಸರುಗಳು, ವೈಟ್ನರ್‌ಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸತಕ್ಕದ್ದು ಮತ್ತು ಸೂಕ್ತವಾಗಿ ದಸ್ತಾವೇಜಿನಲ್ಲಿ ಅಳಿಸಿರುವುದನ್ನು, ವೈಟ್ನರ್ ಹಾಕಿರುವುದನ್ನು ಯುಕ್ತವಾಗಿ ದೃಢೀಕರಿಸಿದ ಹೊರತು ಅದನ್ನು ಅಂಗೀಕರಿಸತಕ್ಕದ್ದಲ್ಲ.

(ಡಿ) ಪ್ರಾಧಿಕಾರದ ಕಚೇರಿಯಲ್ಲಿ ಸ್ವೀಕರಿಸಲಾದ ಎಲ್ಲ ಮೊತ್ತಗಳನ್ನು ಅಥವಾ ಪ್ರಾಧಿಕಾರದ ಲೆಕ್ಕಕ್ಕೆ ಜಮೆ ಮಾಡಲು ಯಾವುದೇ ಬ್ಯಾಂಕಿನಲ್ಲಿ ಸಂದಾಯ ಮಾಡಿದ ಮೊತ್ತಗಳನ್ನು ಯುಕ್ತ ಲೆಕ್ಕಶೀರ್ಷಿಕೆ ಅಡಿಯಲ್ಲಿ ಲೆಕ್ಕಕ್ಕೆ ತೆಗೆದುಕೊಳ್ಳತಕ್ಕದ್ದು ಮತ್ತು ಆ ನಮೂದುಗಳಿಗೆ ಪ್ರಾಧಿಕಾರದ ಲೆಕ್ಕಪತ್ರಾಧಿಕಾರಿಯು ಮತ್ತು ಆಯುಕ್ತರು ಚಿಕ್ಕರುಜು ಹಾಕತಕ್ಕದ್ದು.

(3) ಯಾವುದೇ ಬಿಲ್ಲುಗಳು, ಪ್ರಯಾಣಭತ್ಯೆ ಬಿಲ್ಲುಗಳು ಮತ್ತು ಸಾದಿಲ್ವಾರು ಬಿಲ್ಲುಗಳನ್ನು ಸಿದ್ಧಪಡಿಸುವಲ್ಲಿ ಮತ್ತು ನಿಯಂತ್ರಿಸುವಲ್ಲಿ ರಾಜ್ಯ ಆರ್ಥಿಕ ಸಂಹಿತೆಯಲ್ಲಿ ಮತ್ತು ರಾಜ್ಯ ಖಜಾನೆ ಸಂಹಿತೆಯಲ್ಲಿ ಒಳಗೊಂಡಿರುವ ನಿಯಮಗಳು ಅನ್ವಯವಾಗತಕ್ಕದ್ದು.

(4) ಅಂಚೆ ಮುದ್ರಾಂಕಗಳನ್ನು ಖರೀದಿಸಿ ಅವುಗಳನ್ನು ಪ್ರಾಧಿಕಾರದ ಕಚೇರಿಯಲ್ಲಿ ಬಳಕೆಗಾಗಿ ನೀಡತಕ್ಕದ್ದು. ಅಂಚೆ ಮುದ್ರಾಂಕಗಳ ವೆಚ್ಚದ ಸಂಬಂಧದಲ್ಲಿ ಪ್ರತ್ಯೇಕ ಸಾದಿಲ್ವಾರು ಬಿಲ್ಲಿನ ಮೂಲಕ ಹಣ ತೆಗೆಯತಕ್ಕದ್ದು.

(5) ವೆಚ್ಚವನ್ನು ಈ ಮುಂದಿನ ಪ್ರಧಾನ ಶೀರ್ಷಿಕೆ ಮತ್ತು ಉಪಶೀರ್ಷಿಕೆಗಳ ಅಡಿಯಲ್ಲಿ ವರ್ಗೀಕರಿಸತಕ್ಕದ್ದು:–

ಪ್ರಧಾನ ಶೀರ್ಷಿಕೆ	ಉಪಶೀರ್ಷಿಕೆ
(ಎ) ಅಧ್ಯಕ್ಷರು ಮತ್ತು ಸದಸ್ಯರಿಗೆ ಭತ್ಯೆಗಳು ಮತ್ತು ಫೀಜುಗಳು	(i) ಪ್ರಾಧಿಕಾರದ ಅಧ್ಯಕ್ಷರು ಮತ್ತು ಸದಸ್ಯರಿಗೆ ಭತ್ಯೆಗಳು ಅಥವಾ ಫೀಜುಗಳು
(ಬಿ) ಸಿಬ್ಬಂದಿ ವರ್ಗದ ಸಂಬಳ	(i) ಆಯುಕ್ತರ ಸಂಬಳ (ii) ಸಿಬ್ಬಂದಿ ವರ್ಗದ ಸಂಬಳ
(ಸಿ) ಭತ್ಯೆಗಳು	(i) ಪ್ರಯಾಣ ಭತ್ಯೆ (ii) ಇತರ ಭತ್ಯೆಗಳು
(ಡಿ) ಸಾದಿಲ್ವಾರುಗಳು	(i) ಬಾಡಿಗೆ ದರಗಳು ಮತ್ತು ತೆರಿಗೆಗಳು (ii) ಅಂಚೆ ಮತ್ತು ಟೆಲಿಗ್ರಾಂ ವೆಚ್ಚ (iii) ಲೇಖನ ಸಾಮಗ್ರಿ (iv) ಪುಸ್ತಕಗಳು ಮತ್ತು ನಿಯತಕಾಲಿಕೆಗಳು (v) ವಿದ್ಯುತ್ ಮತ್ತು ಲೈಟಿಂಗ್ ವೆಚ್ಚಗಳು (vi) ದೂರವಾಣಿ ವೆಚ್ಚಗಳು (vii) ಮುದ್ರಣ ವೆಚ್ಚಗಳು (viii) ಪೀಠೋಪಕರಣಗಳು (ix) ಇತರೆ
(ಇ) ಕಾನೂನು ಸಂಬಂಧೀ ವೆಚ್ಚಗಳು	(i) ವಕೀಲರ ಫೀಜುಗಳು (ii) ಮುದ್ರಾಂಕ ವೆಚ್ಚಗಳು (iii) ನ್ಯಾಯಾಲಯ ಫೀಜುಗಳು
(ಎಫ್) ಸಾಲಗಳು ಮತ್ತು ಮುಂಗಡಗಳು	(i) ಸಾಲಗಳ ಮರುಪಾವತಿ (ii) ಸಾಲಗಳ ಮೇಲಿನ ಬಡ್ಡಿ (iii) ಸಾಲಗಳು ಮತ್ತು ಮುಂಗಡಗಳು

ಪ್ರಧಾನ ಶೀರ್ಷಿಕೆ	ಉಪಶೀರ್ಷಿಕೆ
(ಜಿ) ಇತರ ವೆಚ್ಚಗಳು	(i) ಅನುದಾನಗಳು ಮತ್ತು ವಿದ್ಯಾರ್ಥಿವೇತನಗಳು (ii) ಸಾಲಗಳು ಮತ್ತು ಕಟ್ಟಡಗಳ ಮೇಲಿನ ಬಂಡವಾಳ ವೆಚ್ಚ (iii) ನಿರ್ವಹಣೆ ಮತ್ತು ದುರಸ್ತಿಗಳು
	(iv) ಭದ್ರತಾ ಪತ್ರಗಳು, ಡಿಬೆಂಚರುಗಳು, ಸ್ಟಾಕ್‌ಗಳು ಅಥವಾ ಇತರ ಬೆಲೆಯುಳ್ಳ ಭದ್ರತೆಗಳ ಖರೀದಿಗಳು.

ಅಧ್ಯಾಯ –XI

ಲೆಕ್ಕ ಪತ್ರಗಳು ಮತ್ತು ಲೆಕ್ಕ ಪರಿಶೋಧನೆ

22. ಕರ್ನಾಟಕ ಆರ್ಥಿಕ ಸಂಹಿತೆ, 1958ರ ಅಂಗೀಕಾರ.–ಪ್ರಾಧಿಕಾರವು ಕರ್ನಾಟಕ ಆರ್ಥಿಕ ಸಂಹಿತೆ, 1958ರ ಉಪಬಂಧಗಳನ್ನು ಅನುಸರಿಸತಕ್ಕದ್ದು ಮತ್ತು ನಮೂನೆ 2ರಲ್ಲಿ ಹೇಳಿರುವವುಗಳ ಜೊತೆಗೆ ಗೊತ್ತುಪಡಿಸಲಾದಂಥ ಪುಸ್ತಕಗಳು ಮತ್ತು ರಿಜಿಸ್ಟರುಗಳು ಹಾಗೂ ನಮೂನೆಗಳನ್ನು ಅಂಗೀಕರಿಸತಕ್ಕದ್ದು ಮತ್ತು ನಿರ್ವಹಿಸತಕ್ಕದ್ದು.

23. ಲೆಕ್ಕ ಪರಿಶೋಧನೆ.–ಪ್ರಾಧಿಕಾರದ ಲೆಕ್ಕಪತ್ರಗಳನ್ನು, ಕಾಲಕಾಲಕ್ಕೆ, ಕೊನೆಯಪಕ್ಷ ವರ್ಷಕೊಮ್ಮೆ ರಾಜ್ಯ ಲೆಕ್ಕ ಪತ್ರಗಳ ಇಲಾಖೆಯ ನಿಯಂತ್ರಕರು ಮತ್ತು ರಾಜ್ಯ ಸರ್ಕಾರವು ಸೂಕ್ತವೆಂದು ಭಾವಿಸಬಹುದಾದಂಥ ಇತರ ಏಜೆನ್ಸಿಯು ಸಹ ಲೆಕ್ಕಪರಿಶೋಧನೆ ಮಾಡತಕ್ಕದು.

24. ಲೆಕ್ಕಪರಿಶೋಧಕರು ಪ್ರಾಧಿಕಾರಕ್ಕೆ ನೋಟೀಸು ನೀಡುವುದು.–(1) ಲೆಕ್ಕ ಪರಿಶೋಧಕರು ತಾವು ಲೆಕ್ಕಪರಿಶೋಧನೆಯನ್ನು ಪ್ರಾರಂಭಿಸಲು ಉದ್ದೇಶಿಸಿರುವಂಥ ದಿನಾಂಕದ ಬಗ್ಗೆ ಎರಡು ವಾರಗಳಿಗಿಂತ ಕಡಿಮೆ ಇಲ್ಲದಂತೆ ಮುಂಚಿತವಾಗಿ ಪ್ರಾಧಿಕಾರಕ್ಕೆ ಲಿಖಿತ ನೋಟೀಸು ನೀಡತಕ್ಕದು:

ಪರಂತು, ಈ ನಿಯಮದಲ್ಲಿ ಏನೇ ಇದ್ದರೂ, ಲೆಕ್ಕಪರಿಶೋಧಕರು, ವಿಶೇಷ ಕಾರಣಗಳಿಗಾಗಿ, ಅವನ್ನು ಬರೆದು ದಾಖಲಿಸಿ, ಎರಡುವಾರಗಳಿಗಿಂತ ಕಡಿಮೆ ಅವಧಿಯ ನೋಟೀಸು ನೀಡಬಹುದು ಅಥವಾ ಪ್ರಾಧಿಕಾರಕ್ಕೆ ನೋಟೀಸು ನೀಡದೆ ವಿಶೇಷ ಅಥವಾ ಸವಿವರ ಲೆಕ್ಕಪರಿಶೋಧನೆಯನ್ನು ಪ್ರಾರಂಭಿಸಬಹುದು.

(2) ಲೆಕ್ಕಪರಿಶೋಧಕನು ಅಥವಾ ಲೆಕ್ಕಪರಿಶೋಧಕರು ತಮ್ಮ ಕರ್ತವ್ಯಗಳನ್ನು ನಿರ್ವಹಿಸುವ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳು ಮತ್ತು ಇತರೆ ದಾಖಲೆಗಳನ್ನು ನೋಡಲು ಅವಕಾಶವನ್ನು ಹೊಂದಿರತಕ್ಕದ್ದು.

25. ಲೆಕ್ಕಪರಿಶೋಧಕರ ವರದಿಯ ನಮೂನೆ.– ಪ್ರಾಧಿಕಾರದ ಲೆಕ್ಕಪತ್ರಗಳನ್ನು ಪರಿಶೋಧಿಸುವಂಥ ರೀತಿಯು ಮತ್ತು ಲೆಕ್ಕಪರಿಶೋಧಕರ ವರದಿಯ ಒಳಾಂಶಗಳು ನಮೂನೆ 3ರಲ್ಲಿ ಸೂಚಿಸಿರುವಂತೆ ಇರತಕ್ಕದು.

26. ಪ್ರಾಧಿಕಾರಕ್ಕೆ ಮತ್ತು ಸರ್ಕಾರಕ್ಕೆ ಲೆಕ್ಕಪರಿಶೋಧನಾ ವರದಿ.–ಲೆಕ್ಕಪರಿಶೋಧಕನು, ಲೆಕ್ಕಪರಿಶೋಧನೆಯನ್ನು ಪೂರ್ಣಗೊಳಿಸಿದ ತರುವಾಯ ಮೂರು ತಿಂಗಳ ಒಳಗಾಗಿ ಲೆಕ್ಕಪರಿಶೋಧನಾ ವರದಿಯ ಒಂದು ಪ್ರತಿಯನ್ನು ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದು.

27. ಲೆಕ್ಕಪತ್ರಗಳ ಪ್ರಕಟಣೆ.– ಜಮೆ ಮತ್ತು ಖರ್ಚುಗಳ ಪರಿಶೋಧಿತ ವಾರ್ಷಿಕ ಲೆಕ್ಕಪತ್ರಗಳು ಸಾರ್ವಜನಿಕ ಪರಿಶೀಲನೆಗೆ ಮುಕ್ತವಾಗಿರತಕ್ಕದು ಮತ್ತು ರಾಜ್ಯ ಸರ್ಕಾರದ ಅನುಮೋದನೆ ಪಡೆದು ಅದನ್ನು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದು.

ನಮೂನೆ –1

(20ನೇ ನಿಯಮವನ್ನು ನೋಡಿ)

_____________ ವರ್ಷಕ್ಕಾಗಿ ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ವಾರ್ಷಿಕ ಆಡಳಿತ ವರದಿ.

(1) ಆಡಳಿತ,–

(1) ಪ್ರಾಧಿಕಾರದ ರಚನೆ.

(2) ಪ್ರಾಧಿಕಾರದ ಸದಸ್ಯರ ಹೆಸರುಗಳು ಮತ್ತು ಅವರ ಹುದ್ದೆ.

(3) ನಡೆಸಲಾದ ಸಭೆಗಳ ಸಂಖ್ಯೆ ಮತ್ತು ಅಧಿನಿಯಮದ 4ನೇ ಪ್ರಕರಣದಲ್ಲಿ ಗೊತ್ತುಪಡಿಸಲಾದಷ್ಟು ಸಂಖ್ಯೆಯ ಸಭಗಳನ್ನು ನಡೆಸದಿರುವುದಕ್ಕೆ ಕಾರಣಗಳು.

(4) ಸಭೆಗಳಿಗೆ ನಿರಂತರವಾಗಿ ಗೈರುಹಾಜರಾದಂಥ ಸದಸ್ಯರ ಹೆಸರುಗಳು.

(5) ಪ್ರಾಧಿಕಾರದ ಸಮಿತಿ ಮತ್ತು ಉಪ ಸಮಿತಿಗಳ ರಚನೆ.

(6) ಸಮಿತಿಗಳು ಮತ್ತು ಉಪ ಸಮಿತಿಗಳು ನಡೆಸಿದ ಸಭೆಗಳು.

(7) ಪ್ರಾಧಿಕಾರದ ಅಧಿಕಾರಿಗಳು ಮತ್ತು ಸಿಬ್ಬಂದಿ.

(8) ಪ್ರಾಧಿಕಾರ, ಅಧಿಕಾರಿಗಳು ಮತ್ತು ಸಿಬ್ಬಂದಿಗಾಗಿ ಇರುವ ಆವರಣಗಳು.

(9) ಪೀಠೋಪಕರಣಗಳು ಮತ್ತು ಲೇಖನ ಸಾಮಗ್ರಿಗಳು.

(10) ಪ್ರಾಧಿಕಾರದ ಸ್ಥಿರಾಸ್ತಿ.

(11) ಮೋಟಾರು ವಾಹನಗಳು, ಸಾಧನ ಸಾಮಗ್ರಿ, ಜೋಡನೆಗಳು.

(12) ಪುಸ್ತಕಗಳು, ನಮೂನೆಗಳು, ದಾಖಲೆಗಳ ನಿರ್ವಹಣೆ.

(13) ನಗದು, ಅಮೂಲ್ಯ ಸಾಮಗ್ರಿಗಳು, ಮುಖ್ಯ ದಾಖಲೆಗಳು ಮತ್ತು ಕಡತಗಳು, ಅವುಗಳ ಅಭಿರಕ್ಷೆ ಮತ್ತು ಸಂರಕ್ಷಣೆ.

(2) ಬಜೆಟ್ ಮತ್ತು ಸ್ಕೀಂಗಳು,–

(1) ವಾರ್ಷಿಕ ಜಮೆಗಳು ಮತ್ತು ಖರ್ಚುಗಳು

ಕಾಮಗಾರಿಗಳ, ಕಟ್ಟಡಗಳ, ಸ್ಕೀಂಗಳ, ಸೇವೆಯ ಹೆಸರು	ಹಿಂದಿನ ವರ್ಷದ ಅಂತ್ಯದವರೆಗೆ ಮಾಡಿದ ವೆಚ್ಚ, ಆಗಿರುವ ವಾಸ್ತವಿಕ ಪ್ರಗತಿ	ಪ್ರಸಕ್ತ ವರ್ಷದ ವೆಚ್ಚ
1	2	3

(2) 1ನೇ ಬಾಬಿನಲ್ಲಿ ಉಲ್ಲೇಖಿಸಲಾದ ಕಾಮಗಾರಿಯ ಪ್ರಗತಿಯಲ್ಲಿ ವಿಳಂಬವೇನಾದರೂ ಆಗಿದ್ದರೆ, ಅದಕ್ಕೆ ಕಾರಣಗಳು.

(3) ಸ್ಕೀಂಗಳನ್ನು, ಪ್ರಾಜೆಕ್ಟ್‌ಗಳನ್ನು ಪರಿಷ್ಕರಣೆ ಏನಾದರೂ ಮಾಡಿದ್ದರೆ, ಆ ಪರಿಷ್ಕರಣೆಗಳಿಗೆ ಕಾರಣಗಳು.

(4) ತಪ್ಪಿತಸ್ಥರಾಗಿರುವ ಏಜೆನ್ಸಿಗಳು ಮತ್ತು ಇಲಾಖೆಗಳು, ಅಂಥ ಏಜೆನ್ಸಿಗಳ ಮತ್ತು ಇಲಾಖೆಗಳ ಮೇಲೆ ತೆಗೆದುಕೊಂಡ ಕ್ರಮ.

(5) ಪ್ರಾಧಿಕಾರ ನಿಧಿಯ ಪ್ರಸ್ತುತ ಸ್ಥಿತಿಗತಿ,–

[i] (ಎ) ಹಣತೇವಣಿ ಇಟ್ಟಿರುವ ಬ್ಯಾಂಕಿನ ಹೆಸರು.

(ಬಿ) ಖಾತೆಸಂಖ್ಯೆ ಮತ್ತು ಖಾತೆಯ ಸ್ವರೂಪ.

(ಸಿ) ಬಾಕಿ

[ii] ಠೇವಣಿಗಳು ಮತ್ತು ಠೇವಣಿಗಳ ಸ್ವರೂಪ.

[iii] ಎತ್ತಲಾದ ಸಾಲಗಳು ಮತ್ತು ಅವುಗಳ ವೆಚ್ಚ.

[iv] ಅನುದಾನಗಳು, ದನಸಹಾಯಗಳು, ವಂತಿಗೆಗಳು, ದೇಣಿಗೆಗಳು, ಕಾಣಿಕೆಗಳು.

(6) ಲೆಕ್ಕಪತ್ರಗಳ ನಿರ್ವಹಣೆ ಮತ್ತು ಲೆಕ್ಕಪರಿಶೋಧನೆ ಮತ್ತು ಅದರ ಹಂತ.

(7) ಹಣಕಾಸು ವರ್ಷದ ಅವಧಿಯಲ್ಲಿ ಹಣ ದುರುಪಯೋಗ ಮತ್ತು ನಷ್ಟ, ಆಸ್ತಿಯ ನಷ್ಟ, ಆಸ್ತಿಯ ಒತ್ತುವರಿ, ಕಳ್ಳತನ ಇವು ಯಾವುದಾದರೂ ಇದ್ದರೆ ಅವು ತೆಗೆದುಕೊಂಡ ಕ್ರಮ ಅಥವಾ ಮಾಡಿದ ಶಿಫಾರಸ್ಸು.

(8) ಆಯುಕ್ತರು, ಅವರ ಅಧಿಕಾರಿಗಳು ಅಥವಾ ಅಧಿಕೃತ ಏಜೆನ್ಸಿಗಳು ಪ್ರಾಜೆಕ್ಟಗಳ ಮತ್ತು ಸ್ಕೀಂಗಳ ಪರಿಶೀಲನೆ ಮಾಡುವುದು, ಅಂಥ ಪರಿಶೀಲನೆಗಳ ಮೇಲಿನ ಟಿಪ್ಪಣಿಗಳು ಮತ್ತು ಜಾರಿ ಏಜೆನ್ಸಿಗಳು ಕೈಗೊಂಡ ಕ್ರಮಗಳು.

(9) ಯಾವುದೇ ಇತರ ಪ್ರಮುಖ ವಿಷಯಗಳು, ಷರಾಗಳೊಂದಿಗೆ.

(3) ರಾಜ್ಯ ಮಟ್ಟದ ಸಲಹಾ ಸಮಿತಿ.–

1) ವರ್ಷದ ಅವಧಿಯಲ್ಲಿ ರಾಜ್ಯಮಟ್ಟದ ಸಲಹಾ ಸಮಿತಿಯು ನಡೆಸಿದ ಸಭೆಗಳ ಸಂಕ್ಷಿಪ್ತ ವರದಿ ಮತ್ತು ಸಭೆಗಳ ದಾಖಲೆ.

2) ವರ್ಷದ ಅವಧಿಯಲ್ಲಿ ಪ್ರಮುಖ ವಿಷಯಗಳ ಮೇಲೆ ಪ್ರಾಧಿಕಾರಕ್ಕೆ ರಾಜ್ಯಮಟ್ಟದ ಸಲಹಾ ಸಮಿತಿಯು ನೀಡಿದ ಸಲಹೆಯ ಸಂಕ್ಷಿಪ್ತ ವರದಿ.

3) ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದಂತೆ ಪಾಲನೆಯ ಸಂಕ್ಷಿಪ್ತ ವರದಿ.

ನಮೂನೆ –2

(22ನೇ ನಿಯಮವನ್ನು ನೋಡಿ)

1. ಲೆಕ್ಕ ಪತ್ರ ಪುಸ್ತಕಗಳು, ರಿಜಿಸ್ಟರುಗಳು ಮತ್ತು ಲೆಡ್ಜರುಗಳ ನಿರ್ವಹಣೆ.–(1) ಪ್ರಾಧಿಕಾರದ ನಿಧಿಗೆ ಸಂಬಂಧಪಟ್ಟಂತೆ ಪ್ರಾಧಿಕಾರದ ಕಚೇರಿಯಲ್ಲಿ ಈ ಮುಂದಿನ ರಿಜಿಸ್ಟರುಗಳನ್ನು ನಿರ್ವಹಿಸತಕ್ಕದು,–

(ಎ) ವೇತನ ಪುಸ್ತಕ.

(ಬಿ) ಲೆಕ್ಕ ಪತ್ರಗಳ ಲೆಡ್ಜರು.

(ಸಿ) ನಗದು ಪುಸ್ತಕ.

(ಡಿ) ವಂತಿಗೆಗಳ ವಸೂಲಿಗಳನ್ನು ಸೂಚಿಸುವ ಬೇಡಿಕೆ, ಸಂಗ್ರಹಣೆ ಮತ್ತು ಬಾಕಿ ರಿಜಿಸ್ಟರು.

(ಇ) ಮಾಡಬೇಕಾದ ವಸೂಲಿಗಳನ್ನು ತೋರಿಸುವ ರಿಜಿಸ್ಟರು.

(ಎಫ್) ಪ್ರಾಧಿಕಾರದ ಭೂಮಿ ಮತ್ತು ಆಸ್ತಿಗಳಿಗೆ ಸಂಬಂಧಪಟ್ಟಂತೆ ಬಾಡಿಗೆಯ ಅಥವಾ ಭೂಕಂದಾಯದ ಬೇಡಿಕೆ ಮತ್ತು ಸಂಗ್ರಹಣೆಗಳ ರಿಜಿಸ್ಟರು.

